# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 60
Volume - 01 Issue - 60

ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269

ಚಿತ್ರದುರ್ಗ
Chitradurga

ದಿನಾಂಕ: 09–09–2023 ಶನಿವಾರ
Date: 09-09-2023 Saturday

ಪುಟ: 4
Page: 4

ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

ನೋವಿನಿಂದ ಬಂದ ಕಕ್ಷಿದಾರರು ನಲಿವಿನಿಂದ ಮನೆಗೆ ಹೋಗಬೇಕು: ರಾಜೇಶ್ವರಿ.ಎನ್.ಹೆಗಡೆ 2

ಶಿಕ್ಷಣ ಕ್ಷೇತ್ರಕ್ಕೆ ಕೊಡುಗೆ ನೀಡಿದವರ ಸ್ಮರಣೆ ಅಗತ್ಯ: ಶಾಸಕ ಟಿ.ರಘುಮೂರ್ತಿ 3

ವಿರಾಟ್ ಹಿಂದೂ ಮಹಾಸಾಗರ ಗಣಪತಿ ಉತ್ಸವಕ್ಕೆ ಚಾಲನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕೃಷ್ಣರಾಜಸಾಗರ ಜಲಾಶಯದಲ್ಲಿ ನೀರಿನ ಮಟ್ಟ 98 ಅಡಿಗೆ ಕುಸಿತ

ಮಂಡ್ಯ: ಕೃಷ್ಣರಾಜಸಾಗರ ಜಲಾಶಯದಲ್ಲಿ ನೀರಿನ ಮಟ್ಟ 98 ಅಡಿಗೆ ಕುಸಿತವಾಗಿದೆ. ತಮಿಳುನಾಡಿಗೆ ನೀರು ಹರಿಸಿದ ಪರಿಣಾಮ 12 ಟಿಎಂಸಿ ನೀರು ಖಾಲಿಯಾಗಿದೆ. ಜಲಾಶಯದ ಹಿನ್ನೀರು ಪ್ರದೇಶ ಬಹುತೇಕ ಬರಡು ಭೂಮಿಯಂತಾಗಿದೆ. ತಮಿಳುನಾಡಿಗೆ ಮತ್ತಷ್ಟು ನೀರು ಹರಿಸಿದರೆ ಕುಡಿಯುವ ನೀರಿಗೂ ಹಾಹಾಕಾರ ಉಂಟಾಗುತ್ತದೆ. ಬೆಳೆಗೆ ನೀರಿಲ್ಲದೆ ಆತಂಕದಲ್ಲಿರುವ ರೈತರು ರಸ್ತೆಗಿಳಿದು ಪ್ರತಿಭಟನೆ ಮಾಡುತ್ತಿದ್ದಾರೆ.

### ಬಿಜೆಪಿ, ಜೆಡಿಎಸ್ ಮೊದಲಿನಿಂದಲು ಒಂದೆ ಇದ್ದಾರೆ; ಬೈರತಿ ಸುರೇಶ್

ಬಿಜೆಪಿ, ಜೆಡಿಎಸ್ ಮೊದಲಿನಿಂದಲು ಒಂದೆ ಇದ್ದಾರೆ. ಬಿಜೆಪಿ, ಜೆಡಿಎಸ್ ಮೈತ್ರಿಯಿಂದ ಕಾಂಗ್ರೆಸ್‌ಗೆ ಯಾವುದೇ ಪರಿಣಾಮ ಬೀರಲ್ಲ. ಕಾಂಗ್ರೆಸ್ ಪಕ್ಷ ಸ್ವತಂತ್ರವಾಗಿ ಸ್ಪರ್ಧೆ ಮಾಡುತ್ತೆದೆ. ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ 20 ಕ್ಕೂ ಹೆಚ್ಚು ಸ್ಥಾನ ಗೆಲ್ಲುವ ವಿಶ್ವಾಸ ಇದೆ. ಬಿಜೆಪಿ, ಜೆಡಿಎಸ್ ಹಿಂದಿನಿಂದ ಒಳಗೊಳಗೆ ಒಂದೆ ಇದ್ದರು, ಇದೀಗ ಬಹಿರಂಗವಾಗಿ ಒಪ್ಪಂದ ಮಾಡಿಕೊಂಡಿದ್ದಾರೆ ಅಷ್ಟೇ ಎಂದು ಕಲಬುರಗಿ ನಗರದಲ್ಲಿ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಹೇಳಿದರು.

### ಹಿಂದೂ ದೇವರ ಹೆಸರು ಇಟ್ಟುಕೊಂಡು, ಸನಾತನ ವಿರುದ್ಧ ಮಾತನಾಡ್ತಾರೆ


ಬೆಂಗಳೂರು: ಹಿಂದೂ ದೇವರ ಹೆಸರು ಇಟ್ಟುಕೊಂಡಿದ್ದಾರೆ. ಸನಾತನ ಧರ್ಮದ ವಿರುದ್ಧ ಮಾತನಾಡ್ತಾರೆ. ಸಿದ್ದರಾಮ, ಶಿವಕುಮಾರ, ಪರಮೇಶ್ವರ, ಚಂದ್ರಶೇಖರ ಎಂದೆಲ್ಲಾ ಹೆಸರು ಇಟ್ಟುಕೊಂಡಿದ್ದಾರೆ. ಮಾತನಾಡುವ ಮೊದಲು ನಿಮ್ಮ ಹೆಸರು ಬದಲಾಯಿಸಿಕೊಳ್ಳಿ. ನಾಯಿ, ಕೋಳಿ, ಕತ್ತೆ ಎಂದೆಲ್ಲಾ ಹೆಸರು ಬದಲಾಯಿಸಿಕೊಳ್ಳಿ. ಪ್ರಚಾರಕ್ಕಾಗಿ ಸನಾತನ ಧರ್ಮದ ವಿರುದ್ಧ ಮಾತನಾಡುವುದನ್ನು ನಿಲ್ಲಿಸಿ ಎಂದು ಶಾಸಕ ಎಸ್. ಆರ್. ವಿಶ್ವನಾಥ್ ಹೇಳಿದರು.

# ಕಾಂಗ್ರೆಸ್‌ನಿಂದ ರೈತ ವಿರೋಧಿ ನೀತಿ ಜಾರಿ

» ಚಿತ್ರದುರ್ಗ

ಮಳೆಯ ಅಭಾವದಿಂದ ರಾಜ್ಯದಲ್ಲಿ ಉಂಟಾಗಿರುವ ಬರಗಾಲದ ಸಮಸ್ಯೆ, ರೈತರ ಪಂಪಸೆಟ್‌ಗಳಿಗೆ ಅನಿಯಮಿತ ಲೋಡ್ ಶೆಡ್ಡಿಂಗ್ ಹಾಗೂ ರೈತಪರ ಯೋಜನೆಗಳನ್ನು ರದ್ದು ಗೊಳಿಸಿರುವುದನ್ನು ವಿರೋಧಿಸಿ ಬಿಜೆಪಿ ರೈತ ಮೋರ್ಚಾ ಶುಕ್ರವಾರ ನಗರದಲ್ಲಿ ಪ್ರತಿಭಟನೆ ನಡೆಸಿತು.

ರಾಜ್ಯದಲ್ಲಿ ಮಳೆಯ ಅಭಾವದಿಂದ ಬರಗಾಲದ ಸಮಸ್ಯೆ ಉಂಟಾಗಿದ್ದು, ಎಲ್ಲಾ ಜಲಾಶಯಗಳಲ್ಲಿ ಪ್ರತಿ ವರ್ಷ ಸಂಗ್ರಹವಾಗಬೇಕಿದ್ದ ನೀರಿನ ಪ್ರಮಾಣವು ಕುಸಿತ ಕಂಡಿದೆ. ಇದರಿಂದಾಗಿ ರೈತರ ಜಮೀನುಗಳಿಗೆಸಮರ್ಪಕನೀರುಪೂರೈಕೆಗೆ ಮುಂದಿನ ದಿನಗಳಲ್ಲಿ ತೊಂದರೆಯಾಗುವ ಆತಂಕ ಉಂಟಾಗಿದೆ. ಅದರ ಜೊತೆಗೆ ರಾಜ್ಯದಲ್ಲಿ ಉಂಟಾಗಿರುವ ವಿದ್ಯುತ್ ಅಭಾವದಿಂದ ರೈತರ ಪಂಪಸೆಟ್‌ಗಳಿಗೆ ಹಗಲು ಹೊತ್ತಿನಲ್ಲಿ ನಿರಂತರ 7 ಗಂಟೆಗಳ ಕಾಲ ವಿದ್ಯುತ್ ಪೂರೈಕೆ ಮಾಡಬೇಕಾಗಿತ್ತು. ಆದರೆ ಇತ್ತೀಚಿಗೆ ಅನಿಯಮಿತ ಲೋಡ್




ಶೆಡ್ಡಿಂಗ್ ಪರಿಣಾಮ ಹಗಲು ಹೊತ್ತಿನಲ್ಲಿ ವಿದ್ಯುತ್ ಪೂರೈಸುವಲ್ಲಿ ಸರ್ಕಾರ ವಿಫಲವಾಗಿದೆ. ಹೀಗಾಗಿ ಬರಗಾಲಕ್ಕೆ ತುತ್ತಾಗಿರುವ ರೈತರು ಈಗಾಗಲೇ ಶೇ 80 ರಷ್ಟು ಬೆಳೆಗಳನ್ನು ಭಿತ್ತನೆ ಮಾಡಿದ್ದು ಅವುಗಳನ್ನು ರಕ್ಷಿಸಿಕೊಳ್ಳಲು ವಿದ್ಯುತ್ ಸಮಸ್ಯೆ ಉಂಟಾಗಿ ರೈತ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ಅಳಲು ತೋಡಿಕೊಂಡರು.

ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಹಲವಾರು ರೈತಪರ ಯೋಜನೆಗಳಾದ ಕಿಸಾನ್ ಸಮ್ಮಾನ ನಿಧಿ ಯೋಜನೆ, ರೈತ ವಿಧ್ಯಾನಿದಿ ಯೋಜನೆ, ಭೂ ಸಿರಿ ಯೋಜನೆ, ಶ್ರಮ ಶಕ್ತಿ ಯೋಜನೆ, ರೈತ ಸಂಪದ ಯೋಜನೆ, ಎಪಿಎಂಸಿ ಕಾನೂನು, ಕೃಷಿ ಭೂಮಿ ಮಾರಾಟ ಕಾನೂನು, ಜಿಲ್ಲೆಗೊಂದು ಗೋಶಾಲೆ ಯೋಜನೆ, ಕ್ಷೀರ ಸಮೃದ್ದಿ ಸಹಕಾರ ಬ್ಯಾಂಕ್ ಯೋಜನೆಗಳನ್ನು ರದ್ದು ಮಾಡುವ ಮೂಲಕಕೃಷಿಕ್ಷೇತ್ರವನ್ನುಸಂಪೂರ್ಣವಾಗಿ ನಿರ್ಲಕ್ಷಿಸಲಾಗಿದ್ದು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ರಾಜ್ಯದಲ್ಲಿ ಸುಮಾರು 42 ಜನ ರೈತರ ಆತ್ಮಹತ್ಯೆ ಪ್ರಕರಣಗಳ ವರದಿಯಾಗಿರುವುದು ಅತ್ಯಂತ ಆತಂಕಕಾರಿ ಸಂಗತಿಯಾಗಿದೆ ಎಂದು ಕಿಡಿಕಾರಿದರು.ಮುಖ್ಯಮಂತ್ರಿಗಳು ಶೀಘ್ರವೇ ಈ ಎಲ್ಲಾ ಸಮಸ್ಯೆಗಳ ಬಗ್ಗೆ ಗಮನ ಹರಿಸುವ ಮೂಲಕ ತಕ್ಷಣ ರೈತರ ಸಹಾಯಕ್ಕೆ ಬರಬೇಕಾದ ಅಗತ್ಯವಿದೆ. ಹೀಗಾಗಿ ರಾಜ್ಯದಲ್ಲಿ ರೈತರ ಪಂಪಸೆಟ್‌ಗಳಿಗೆ ಉಂಟಾಗಿರುವ ಅನಿಯಮಿತ ಲೋಡ್ ಶೆಡಿಂಗ್ ರದ್ದು ಪಡಿಸಿ, ಹಗಲು ಹೊತ್ತಿನಲ್ಲಿ 7 ಗಂಟೆಗಳ ಕಾಲ ವಿದ್ಯುತ್ ಪೂರೈಸುವುದು ಸೇರಿದಂತೆ ಮಳೆಯ ಅಭಾವದಿಂದ ಉಂಟಾಗಿರುವ ಬರಗಾಲ ಸ್ಥಿತಿ ನಿವಾರಣೆಗೋಸ್ಕರ ಸರ್ಕಾರ ಅಗತ್ಯ ಕ್ರಮಕ್ಕೈಗೊಳ್ಳಬೇಕು ಹಾಗೂ ರೈತರ ಆತ್ಮಹತ್ಯೆಯಂತಹ ಅನಾಹುತಗಳನ್ನು ತಪ್ಪಿಸಿ, ರೈತ ವರ್ಗಕ್ಕೆ ಧೈರ್ಯ ತುಂಬುವ ಮತ್ತು ಆರ್ಥಿಕವಾಗಿ ಸಶಕ್ತರನ್ನಾಗಿ ಮಾಡುವ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಆಗ್ರಹಿಸಿ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ರೈತ ಮೋರ್ಚಾದ ಜಿಲ್ಲಾಧ್ಯಕ್ಷ ವೆಂಕಟೇಶ್ ಯಾದವ್ ವಹಿಸಿದ್ದು, ರಮೇಶ್, ರೇಖಾ, ಶ್ಯಾಮಲ ಶಿವಪ್ರಕಾಶ್, ಭಾರ್ಗವಿ ದ್ರಾವಿಡ್, ಶಿವಣ್ಣಚಾರ್, ನಾಗರಾಜ್ ಬೇದ್ರೆ, ದಗ್ಗೆ ಶಿವಪ್ರಕಾಶ್ ಭಾಗವಹಿಸಿದ್ದರು.

# ಮೊಳಕಾಲ್ಮುರಲ್ಲೂ ಬಿಜೆಪಿ ಪ್ರತಿಭಟನೆ

» ಮೊಳಕಾಲ್ಮುರು

ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ರೈತ ವಿರೋಧಿ ಮತ್ತು ಜನ ವಿರೋಧಿ ಸರ್ಕಾರವಾಗಿದ್ದು ರಾಜ್ಯದಲ್ಲಿ ಕಾಂಗ್ರೇಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ರಾಜ್ಯದಲ್ಲಿ ಸುಮಾರು 42 ಜನ ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿರುವುದು ಅತ್ಯಂತ ಆತಂಕಕಾರಿ ಸಂಗತಿಯಾಗಿದೆ.ಎಂದು ನಾಯಕನಹಟ್ಟಿ ಮಂಡಲ ಅಧ್ಯಕ್ಷ ಶ್ರೀ ರಾಮರೆಡ್ಡಿ ವಿಷಾದ ವ್ಯೆಕ್ತಪಡಿಸಿದರು

ಮೊಳಕಾಲ್ಮುರು ಪಟ್ಟಣದಲ್ಲಿ ಬಿಜೆಪಿ ನೇತೃತ್ವದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ವಿರುದ್ಧ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನೆಯ ನೇತೃತ್ವ ವಹಿಸಿ ಆಕ್ರೋಶ ವ್ಯೆಕ್ತಪಡಿಸಿದರು

ಕಿಸಾನ್ ಸಮಾನ ನಿಧಿ ಯೋಜನೆ, ರೈತ ವಿಧ್ಯಾನಿದಿ ಯೋಜನೆ, ಭೂ ಸಿರಿ ಯೋಜನೆ, ಶ್ರಮ ಶಕ್ತಿ ಯೋಜನೆ, ಅಲ್ಲದೇ ಈ ಹಿಂದೆ ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಹಲವಾರು ರೈತಪರ ಯೋಜನೆಗಳಾದ ರೈತ ಸಂಪದ ಯೋಜನೆ, ಎಪಿಎಂಸಿ ಕಾನೂನು, ಕೃಷಿ ಭೂಮಿ ಮಾರಾಟ



ಕಾನೂನು, ಜಿಲ್ಲೆಗೊಂದು ಗೋಶಾಲೆ ಯೋಜನೆ, ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್ ಈ ಎಲ್ಲ ಯೋಜನೆಗಳನ್ನು ರದ್ದು ಮಾಡುವ ಮೂಲಕ ಕೃಷಿ ಕ್ಷೇತ್ರವನ್ನು ನಿರ್ಲಕ್ಷಿಸಲಾಗಿದೆ.ಎಂದು ವಿಷಾದ ವ್ಯೆಕ್ತಪಡಿಸಿದರು

ಮಳೆಯ ಅಭಾವದಿಂದ ಉಂಟಾಗಿರುವ ಬರಗಾಲದ ಸಮಸ್ಯೆ ವಿದ್ಯುತ್ ಅಭಾವದಿಂದ ರೈತರ ಪಂಪಸೆಟ್‌ಗಳಿಗೆ ಅನಿಯಮಿತ ಲೋಡ್ ಶೆಡ್ಡಿಂಗ್, ರೈತಪರ ಯೋಜನೆಗಳನ್ನು ರದ್ದುಗೊಳಿಸಿರುವುದು, ರಾಜ್ಯದಲ್ಲಿ ಹೆಚ್ಚುತ್ತಿರುವ ರೈತರ ಆತ್ಮಹತ್ಯೆ ಪ್ರಕರಣಗಳಿಗೆ ಸಾಕ್ಷಿಯಾಗಿದೆ ಎಂದು ಬೇಸರ ವ್ಯೆಕ್ತಪಡಿಸಿದರು

ರಾಜ್ಯದಲ್ಲಿ ಮಳೆಯ ಅಭಾವದಿಂದ ಬರಗಾಲದ ಸಮಸ್ಯೆ ಉಂಟಾಗಿದೆ.

# ರೈತರ ಪಾಲಿಗೆ ಕಾಂಗ್ರೆಸ್ ಸರ್ಕಾರ ಶಾಪ: ಬಿಜೆಪಿ



» ಚಳ್ಳಕೆರೆ

ರಾಜ್ಯದಲ್ಲಿ ಬಹುಮತದಿಂದ ಆಡಳಿತಕ್ಕೆ ಬಂದ ಕಾಂಗ್ರೆಸ್ ಪಕ್ಷದ ಸರ್ಕಾರ ಕೇವಲ ನೂರು ದಿನದಲ್ಲೇ ರೈತ ಸಮುದಾಯವನ್ನು ಬೀದಿಗೆ ತಳ್ಳುವ ಮೂಲಕ ರೈತರ ವಿರೋಧಿ ಸರ್ಕಾರವಾಗಿ ಪರಿವರ್ತನೆಯಾಗಿದೆ ಎಂದು ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಜೆ.ಪಿ.ಜಯಪಾಲಯ್ಯ ಆರೋಪಿಸಿದರು. ಅವರು, ಶುಕ್ರವಾರ ತಾಲ್ಲೂಕು ಕಚೇರಿ ಮುಂದೆ ಬಿಜೆಪಿ ರೈತ ಮೋರ್ಚಾ ಹಮ್ಮಿಕೊಂಡಿದ್ದ ಪ್ರತಿಭಟಿಸಿ ಮನವಿ ಅರ್ಪಿಸುವ ಸಂದರ್ಭದಲ್ಲಿ ಮಾತನಾಡಿದರು. ಕಳೆದ ಅವಧಿಯ ಬಿಜೆಪಿ ಸರ್ಕಾರದ ನೇತೃತ್ವದ ವಹಿಸಿದ್ದ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ರೈತರ ಅಭ್ಯುದಯಕ್ಕಾಗಿ ಹಲವಾರು ಯೋಜನೆಗಳನ್ನು ರೂಪಿಸಿದ್ದರು.

ಪುಟ 2

## ಪ್ರಮುಖ ಸುದ್ದಿ

# ಕೋಟೆನಾಡಿನಲ್ಲಿ ಜೀ ಕನ್ನಡ ವಾಹಿನಿಯ ಜೀ ಗಣೇಶೋತ್ಸವ

## ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಮತ್ತು ಭರ್ಜರಿ ಬ್ಯಾಚುಲರ್ಸ್ ಮಹಾಸಂಗಮ

» ಚಿತ್ರದುರ್ಗ

ವೀಕ್ಷಕರಿದ್ದಲ್ಲಿಗೆ ವಾಹಿನಿ ಬರೋದು ಹೊಸತೇನಲ್ಲ,ಆದ್ರೆ ಯಾವಾಗಲು ಹೊಸತನಕ್ಕೆ ಹಾತೊರೆಯುತ್ತ,ತನ್ನ ವೀಕ್ಷಕರಿಗೆ ಹೊಸ ಬಗೆಯ ಕಾರ್ಯಕ್ರಮದ ಮೂಲಕ ಮನೋರಂಜನೆ ನೀಡುತ್ತ ಬಂದಿರುವ ಜೀ ಕನ್ನಡ ವಾಹಿನಿಯು ಸದಾ ವೀಕ್ಷಕರ ನಾಡಿಮಿಡಿತವನ್ನ ಅರಿತು ಕಾರ್ಯಕ್ರಮವನ್ನು ರೂಪಿಸುತ್ತಾ ಬರುತ್ತಿದೆ.

ಇದೀಗ ಈ ನಿಟ್ಟಿನಲ್ಲಿ ತನ್ನ ಜನಪ್ರೀಯ ರಿಯಾಲಿಟಿ ಶೋಗಳಾದ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಮತ್ತು ಭರ್ಜರಿ ಬ್ಯಾಚುಲರ್ಸ್ ಶೋನ ಕಲಾವಿದರೊಂದಿಗೆ ಇದೀಗ ಕೋಟೆ ನಾಡಿನ ಜನರನ್ನ ಮನೋರಂಜಿಸಲು ಸಿದ್ದವಾಗಿದೆ.ಈಗ ಎಲ್ಲೆ ನೋಡಿದರು ಹಬ್ಬಗಳ ಸಂಭ್ರಮ,ಅದರಲ್ಲು ಗಣೇಶ ಚತುರ್ಥಿ ಬಂತು ಅಂದ್ರೆ ಮನೆಯಲ್ಲಿ,ಬೀದಿಗಳಲ್ಲಿ,ಊರಲ್ಲಿ ಒಂದು ತರಹದ ಸಂಭ್ರಮ ಮನೆ ಮಾಡುತ್ತದೆ,ಗಲ್ಲಿಗಲ್ಲಿಗಳಲ್ಲಿ ಕೂರಿಸೋ ಗಣಪನಿಗೆ ಪೂಜೆ ಜೊತೆ ಹಾಡು,ನೃತ್ಯ,ನಗೆಹಬ್ಬ ಕಾರ್ಯಕ್ರಮಗಳು ನಮ್ಮನ್ನ ಮನೋರಂಜಿಸುತ್ತದೆ, ಈ ನಿಟ್ಟಿನಲ್ಲಿ ಆ ಎಲ್ಲಾ ಮನೋರಂಜನೆಯನ್ನ ಒಂದೆ ಕಡೆ ಕೊಡೋಕೆ ಜೀ ಕನ್ನಡ ನಿರ್ಧರಿಸಿದ್ದು ,ತನ್ನ ವಾಹಿನಿಯ ಬಹು ಜನಪ್ರಿಯ ರಿಯಾಲಿಟಿ ಶೋಗಳಾದ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಮತ್ತು ಭರ್ಜರಿ




ಬ್ಯಾಚುಲರ್ಸ್ ತಂಡ ಚಿತ್ರದುರ್ಗದಲ್ಲಿ ಜೀ ಗಣೇಶೋತ್ಸವ ಕಾಯರ್ಕ್ರಮದ ಮೂಲಕ ಅಲ್ಲಿನ ಅಭಿಮಾನಿಗಳನ್ನ ಮನೋರಂಜಿಸಲು ಸಿದ್ದತೆ ನಡೆಸಿದೆ.

ಈ ಎಲ್ಲಾ ವಿಶೇಷತೆಯನ್ನ ನೀವು ನೋಡಬೇಕು ಅಂದ್ರೆ ಈ ಮಹಾಸಂಗಮ ಕಾರ್ಯಕ್ರಮಕ್ಕೆ ನಿಮ್ಮ ಪ್ಯಾಮಿಲಿ ಸಮೇತ ಬರಲೇಬೇಕು ,ಕಾರ್ಯಕ್ರಮದಲ್ಲಿ ಭಾಗವಹಿಸುವ ವೀಕ್ಷಕರಲ್ಲಿ ಅದೃಷ್ಟಶಾಲಿ 101 ವೀಕ್ಷಕರಿಗೆ ಅತ್ಯಾಕರ್ಷಕ ಬಹುಮಾನ ಸಿಗಲಿದ್ದು ಈ ಕಾರ್ಯಕ್ರಮ ಇದೇ ಶನಿವಾರ ದಿನಾಂಕ 9.9.2023ರಂದು ಚಿತ್ರದುರ್ಗದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ದಲ್ಲಿ ಸಂಜೆ 5 ಗಂಟೆಗೆ ನಡೆಯಲ್ಲಿದ್ದು ಸೀಮಿತ ಆಸನಗಳ ವ್ಯವಸ್ಥೆಯಿರುವ ಕಾರಣ ಮೊದಲು ಬಂದವರಿಗೆ ಮೊದಲ ಆದ್ಯತೆ.




## ಫಾಸ್ಟ್ ನ್ಯೂಸ್

### ಮೊಳಕಾಲ್ಮುರಲ್ಲೂ ಬಿಜೆಪಿ ಪ್ರತಿಭಟನೆ

» ಮೊದಲ ಪುಟದಿಂದ

ರಾಜ್ಯದ ಎಲ್ಲಾ ಜಲಾಶಯಗಳಲ್ಲಿ ಪ್ರತಿ ವರ್ಷ ಸಂಗ್ರಹವಾಗಬೇಕಿದ್ದ ನೀರಿನ ಪ್ರಮಾಣವು ಕುಸಿತ ಕಂಡಿದ್ದು, ಇದರಿಂದಾಗಿ ರೈತರ ಜಮೀನುಗಳಿಗೆ ಸಮರ್ಪಕ ನೀರು ಪೂರೈಕೆಗೆ ಮುಂದಿನ ದಿನಗಳಲ್ಲಿ ತೊಂದರೆಯಾಗುವ ಆತಂಕ ಉಂಟಾಗಿದೆ. ಅದರ ಜೊತೆಗೆ ರಾಜ್ಯದಲ್ಲಿ ಉಂಟಾಗಿರುವ ವಿದ್ಯುತ್ ಅಭಾವದಿಂದ ರೈತರ ಪಂಪಸೆಟ್‌ಗಳಿಗೆ ಹಗಲು ಹೊತ್ತಿನಲ್ಲಿ ನಿರಂತರ 7 ಗಂಟೆಗಳ ಕಾಲ ವಿದ್ಯುತ್ ಪೂರೈಕೆ ಮಾಡಬೇಕಾಗಿತ್ತು. ಆದರೆ ಇತ್ತೀಚಿಗೆ ಅನಿಯಮಿತ ಲೋಡ್ ಶೆಡ್ಡಿಂಗ್‌ಗಳ ಪರಿಣಾಮ ಹಗಲು ಹೊತ್ತಿನಲ್ಲಿ ವಿದ್ಯುತ್ ಪೂರೈಸುವಲ್ಲಿ ಸರ್ಕಾರ ವಿಫಲವಾಗಿದೆ. ಹೀಗಾಗಿ ಬರಗಾಲಕ್ಕೆ ತುತ್ತಾಗಿರುವ ರೈತರು ಈಗಾಗಲೇ ಶೇ 80% ರಷ್ಟು ಬೆಳೆಗಳನ್ನು ಬಿತ್ತನೆ ಮಾಡಿದ್ದು ಅವುಗಳನ್ನು ರಕ್ಷಿಸಿಕೊಳ್ಳಲು ವಿದ್ಯುತ್ ಸಮಸ್ಯೆ ಉಂಟಾಗಿ ರೈತ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು ಕಿಸಾನ್ ಸಮಾನ ನಿಧಿ ಯೋಜನೆ, ರೈತ ವಿಧ್ಯಾನಿದಿ ಯೋಜನೆ, ಭೂ ಸಿರಿ ಯೋಜನೆ, ಶ್ರಮ ಶಕ್ತಿ ಯೋಜನೆ, ಅಲ್ಲದೇ ಈ ಹಿಂದೆ ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಹಲವಾರು ರೈತಪರ ಯೋಜನೆಗಳಾದ ರೈತ ಸಂಪದ ಯೋಜನೆ, ಎಪಿಎಂಸಿ ಕಾನೂನು, ಕೃಷಿ ಭೂಮಿ ಮಾರಾಟ ಕಾನೂನು, ಜಿಲ್ಲೆಗೊಂದು ಗೋಶಾಲೆ ಯೋಜನೆ, ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್ ಈ ಎಲ್ಲ ಯೋಜನೆಗಳನ್ನು ರದ್ದು ಮಾಡುವ ಮೂಲಕ ಕೃಷಿ ಕ್ಷೇತ್ರವನ್ನು ನಿರ್ಲಕ್ಷಿಸಲಾಗಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ರಾಜ್ಯದಲ್ಲಿ ಸುಮಾರು 42 ಜನ –ತರ ಆತ್ಮಹತ್ಯೆ ಪ್ರಕರಣಗಳ ವರದಿಯಾಗಿರುವುದು ಅತ್ಯಂತ ಆತಂಕಕಾರಿ ಸಂಗತಿಯಾಗಿದೆ.ಎಂದು ಬೇಸರ ವ್ಯಕ್ತಪಡಿಸಿದರು

### ಶ್ರೀಕೃಷ್ಣ ಜನ್ಮಾಷ್ಟಮಿ



» ದಾವಣಗೆರೆ

ನಗರದ ಪ್ರತಿಷ್ಠಿತ ವಿದ್ಯಾಸಂಸ್ಥೆಗಳಲ್ಲಿ ಒಂದಾದ ಶ್ರೀ ಸೋಮೇಶ್ವರ ವಿದ್ಯಾಲಯದಲ್ಲಿ ಶ್ರೀ ಕೃಷ್ಣ ಜನ್ಮಾಷ್ಠಮಿ ಅತ್ಯಂತ ಯಶಸ್ವಿಯಾಗಿ ನಡೆಯಿತು. ಪೋಷಕರ ಅಮೋಘ ಸಹಕಾರದೊಂದಿಗೆ ನಡೆದ ಈ ಕಾರ್ಯಕ್ರಮದಲ್ಲಿ ಮುದ್ದಾದ ಮಕ್ಕಳು ರಾಧೆ ಕೃಷ್ಣನ ವೇಷದೊಂದಿಗೆ ಶಾಲೆಗೆ ಆಗಮಿಸಿ ಎಲ್ಲರ ಗಮನ ಸೆಳೆದರು. ರಾಧೆಯಾದ ವಿದ್ಯಾರ್ಥಿನಿಯರಿಗೆ ಕೃಷ್ಣನ ಪಾತ್ರದಲ್ಲಿ ಬಂದ ವಿದ್ಯಾರ್ಥಿಗಳು ಸಾಥ್ ನೀಡಿದರು. ಶ್ರೀಕೃಷ್ಣನ ಹಲವು ಹಾಡುಗಳಿಗೆ ಹೆಜ್ಜೆ ಹಾಕುವ ಮೂಲಕ ಶ್ರೀಕೃಷ್ಣನನ್ನ ಸ್ಮರಿಸಿದರು. ಪುಟ್ಟ ಪಟಾಣಿಗಳು ಶ್ರೀಕೃಷ್ಣನಂತೆ ಕಂಗೊಳಿಸುವ ಮೂಲಕ ಶಾಲಾ ವಾತಾವರಣವೇ ಹಬ್ಬದಂತೆ ಮಾರ್ಪಟ್ಟಿತ್ತು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಇದೇ ಸಂಸ್ಥೆಯಲ್ಲಿ 15 ವರ್ಷಗಳಿಂದ ಸೇವೆ ಸಲ್ಲಿಸಿದ ಹಿರಿಯ ಶಿಕ್ಷಕಿ ಶ್ರೀಮತಿ ರೂಪರಾಣಿ ವಹಿಸಿಕೊಂಡಿದ್ದರು. ಅತಿಥಿಗಳಾಗಿ ಪೋಷಕರಾದ ಶ್ರೀಮತಿ ಮಮತಾ ಹಾಗೂ ಶ್ರೀಮತಿ ಮಂಗಳ ಗೌರಿ ಆಗಮಿಸಿದ್ದರು. ಈ ವೇಳೆ ಸಂಸ್ಥೆಯ ಸಂಸ್ಥಾಪಕರು ಹಾಗೂ ಗೌರವ ಕಾರ್ಯದರ್ಶಿಗಳಾದ ಕೆ.ಎಂ ಸುರೇಶ್, ಪ್ರಾಂಶುಪಾಲರಾದ ಶ್ರೀಮತಿ ಪ್ರಭಾವತಿ, ಆಡಳಿತಾಧಿಕಾರಿ ಹರೀಶ್ ಬಾಬು, ಮುಖ್ಯೋಪಧ್ಯಾಯರಾದ ಪ್ರಕಾಶ್, ಶ್ರೀಮತಿ ಗಾಯತ್ರಿ, ಶ್ರೀಮತಿ ಮಾಲಾ ಸೇರಿದಂತೆ ಉಪಸ್ಥಿತರಿದ್ದರು.

### ಲೋಕಾಯುಕ್ತರಿಂದ ಅಹವಾಲು ಸ್ವೀಕಾರ

» ದಾವಣಗೆರೆ

ದಾವಣಗೆರೆ ಘಟಕದ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಸೆ.13 ರಂದು ಚನ್ನಗಿರಿ ತಾಲ್ಲೂಕು ಪ್ರವಾಸ ಕೈಗೊಳ್ಳಲಿದ್ದು ಸಾರ್ವಜನಿಕರು ತಮ್ಮ ದೂರುಗಳನ್ನು ಸಲ್ಲಿಸಬಹುದು.. ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಸೆ. 13 ರಂದು ಚನ್ನಗಿರಿ ಪ್ರವಾಸಿ ಮಂದಿರದಲ್ಲಿ, ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 1.30ರವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಸಾರ್ವಜನಿಕರು ಸರ್ಕಾರದ ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ಇತ್ಯರ್ಥ ಮಾಡದ ಬಗ್ಗೆ ತಮ್ಮ ದೂರು ಹಾಗೂ ಅಹವಾಲುಗಳನ್ನು ಸಲ್ಲಿಸಬಹುದು. ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇದ್ದರೆ, ಅಂತಹ ದೂರುಗಳನ್ನು ಸ್ವೀಕರಿಸಲಾಗುವುದಿಲ್ಲ.

### ನಾನು ಸನಾತನ ಧರ್ಮದ ಬಗ್ಗೆ ಮಾತನಾಡಿಲ್ಲ; ಜಿ ಪರಮೇಶ್ವರ್

ಹುಬ್ಬಳ್ಳಿ: ನಾನು ಸನಾತನ ಧರ್ಮದ ಬಗ್ಗೆ ಮಾತನಾಡಿಲ್ಲ. ನಾನು ಬೇರೆಯವರ ವಿಶ್ಲೇಷಣೆಗಳಿಗೆ ಉತ್ತರ ಕೊಡುವುದಿಲ್ಲ. ಬಿಜೆಪಿಯವರು ಹೋರಾಟ ಮಾಡಲಿ. ರಾಜ್ಯದಲ್ಲಿ ಬಿಜೆಪಿಯವರಿಗೆ ಜನತೆ ಉತ್ತರ ನೀಡಿದ್ದಾರೆ. ಲೋಕಸಭಾ ಚುನಾವಣೆಯಲ್ಲೂ ಬಿಜೆಪಿಗೆ ಜನ ಉತ್ತರ ನೀಡಲಿದ್ದಾರೆ ಎಂದು ಗೃಹ ಇಲಾಖೆ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.

ನೋವಿನಿಂದ ಬಂದ ಕಕ್ಷಿದಾರರು ನಲಿವಿನಿಂದ ಮನೆಗೆ ಹೋಗಬೇಕು: ರಾಜೇಶ್ವರಿ.ಎನ್.ಹೆಗಡೆ

# ರಾಷ್ಟ್ರೀಯ ಲೋಕ ಅದಾಲತ್ ಇಂದು

» ದಾವಣಗೆರೆ

ಜಿಲ್ಲೆಯ ನ್ಯಾಯಾಲಯದ ಆವರಣದಲ್ಲಿ ಸೆ.9ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದ್ದು, ಕಕ್ಷಿದಾರರು ರಾಜೀ ಸಂಧಾನದ ಮೂಲಕ ತಮ್ಮ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡು ಸಮಯ ಹಾಗೂ ಹಣದ ಸದುಪಯೋಗಪಡಿಸಿಕೊಳ್ಳಬೇಕೆಂದು ಪ್ರಧಾನ ಜಿಲ್ಲಾ ಮತ್ತು ಜಿಲ್ಲಾ ಸತ್ರ ನ್ಯಾಯಾಧೀಶರಾದ ರಾಜೇಶ್ವರಿ.ಎನ್. ಹೆಗಡೆ ತಿಳಿಸಿದರು.

ಗುರುವಾರ(7) ರಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಬಗ್ಗೆ ಏರ್ಪಡಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ರಾಷ್ಟ್ರೀಯ ಲೋಕ ಅದಾಲತ್ ಮೂಲಕ ಜಿಲ್ಲೆಯಲ್ಲಿನ ಅತಿ ಹೆಚ್ಚು ಪ್ರಕರಣಗಳನ್ನು ವಿಲೇವಾರಿ ಮಾಡಿ ಸಾರ್ವಜನಿಕರಿಗೆ ಅನುಕೂಲಕ್ಕಾಗಿ ಅವಕಾಶ ಕಲ್ಪಿಸಲಾಗಿದೆ. ಹಲವಾರು ಪ್ರಕರಣಗಳಲ್ಲಿನಾನೇ ಎಂಬ ಭಾವನೆಯಿಂದ ಕೆಲವೊಂದು ಪ್ರಕರಣಗಳು ವರ್ಷಗಟ್ಟಲೆ ನಡೆಯುತ್ತವೆ. ಇದರಿಂದ ಮನಸ್ಸುಗಳು, ಸಮಯ ಹಾಗೂ ಹಣ ವ್ಯರ್ಥವಾಗಲಿದ್ದು ಯಾವುದೇ ಪ್ರಯೋಜನವಾಗುವುದಿಲ್ಲ. ಆದ್ದರಿಂದ ಸಂಬಂಧಿಸಿದ ವಕೀಲರುಗಳು, ಕಕ್ಷಿದಾರರು, ವಿಮಾ ಕಂಪನಿಗಳು ಸಹಕರಿಸಿ ಪ್ರಕರಣಗಳನ್ನು ಶೀಘ್ರವಾಗಿ



ಇತ್ಯರ್ಥಪಡಿಸಿಕೊಳ್ಳುವುದರಿಂದ ಸುಖಿ ಜೀವನ ನಡೆಸಬಹುದು.

ಜಿಲ್ಲೆಯ 25 ನ್ಯಾಯಾಲಯಗಳಲ್ಲಿ ಏಕಕಾಲಕ್ಕೆ ಸೆ. 9 ರಂದು ಲೋಕ್ ಅದಾಲತ್ ನಡೆಯಲಿದೆ. ಬಹುತೇಕ ಕೌಟುಂಬಿಕ ಪ್ರಕರಣಗಳು ಲೋಕ ಅದಾಲತ್ ಹಂತದಲ್ಲಿಯೇ ಇತ್ಯರ್ಥಪಡಿಸಲು ಸಾಧ್ಯವಿರುತ್ತದೆ. ಹಾಗೂ ಅಪಘಾತದ ಪ್ರಕರಣಗಳಿಗೂ ಇಲ್ಲಿ ಶೀಘ್ರ ಪರಿಹಾರ ಸಾಧ್ಯವಾಗುತ್ತದೆ. ಇಲ್ಲದಿದ್ದ ಪಕ್ಷದಲ್ಲಿ ವರ್ಷಾನುಗಟ್ಟಲೆ ಕಾಯಬೇಕಾಗುತ್ತದೆ. ಕೆಲವೊಂದು ಕ್ರಿಮಿನಲ್ ಕೇಸ್‌ಗಳು, ಜಾತಿನಿಂದನೆ ಪ್ರಕರಣ, ಪೋಕ್ಸೊ ಕಾಯ್ದೆ ಅಡಿಯ ಪ್ರಕರಣಗಳು ಇತ್ಯರ್ಥವಾಗುವುದಿಲ್ಲ. ಇಂತಹವುಗಳನ್ನು ಹೊರತುಪಡಿಸಿ ಸಿವಿಲ್ ದಾವೆಗಳಾದ ಜೀವನಾಂಶ, ವಿಚ್ಛೇದನ, ಭೂಸ್ವಾಧೀನ ಇಂತಹ ಪ್ರಕರಣಗಳ ಕಕ್ಷಿದಾರರನ್ನು ಮುಖಾಮುಖಿ ಕೂರಿಸಿ ಪರಿಹಾರ ಕಂಡುಕೊಳ್ಳಬಹುದಾಗಿದೆ.

ಜಿಲ್ಲೆಯಾದ್ಯಂತ 39157 ಪ್ರಕರಣಗಳು ಬಾಕಿ ಇದ್ದು, ಇದರಲ್ಲಿ ಸೆ.9 ರಂದು ಸುಮಾರು 5400 ಇಂತಹ ಪ್ರಕರಣಗಳನ್ನು ಇತ್ಯರ್ಥಪಡಿಸಲು ಗುರುತಿಸಲಾಗಿದೆ. ಕನಿಷ್ಠ 4 ರಿಂದ 5 ಸಾವಿರ ಇಂತಹ ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದ್ದು ಇದಕ್ಕೆ ವಿವಿಧ ಇಲಾಖೆಗಳ ಸಹಕಾರ ಅಗತ್ಯವೆಂದರು.

ನ್ಯಾಯಾಲಯದಲ್ಲಿ ದಾಖಲಾಗದಿರುವ ಪ್ರಕರಣಗಳನ್ನು (ವ್ಯಾಜ್ಯಪೂರ್ವ ಪ್ರಕರಣಗಳು) ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಅಂತಹ ಪ್ರಕರಣಗಳಾದ ಚೆಕ್ ಅಮಾನ್ಯ ಪ್ರಕರಣ, ಭೂಸ್ವಾಧೀನ ಪರಿಹಾರ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು,ಎಂ.ಎಂ.ಡಿ.ಆರ್ ಕಾಯ್ದೆಯಡಿಯ ಪ್ರಕರಣಗಳು, ಕಾರ್ಮಿಕ ವಿವಾದಗಳು, ಕೈಗಾರಿಕಾ ಕಾರ್ಮಿಕ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು, ವೈವಾಹಿಕ ಕುಟುಂಬ ನ್ಯಾಯಾಲಯ ಹಾಗೂ ಇತರೆ ಸಿವಿಲ್ ಪ್ರಕರಣಗಳನ್ನು ಲೋಕ ಅದಾಲತ್ ಮೂಲಕ ಬಗೆಹರಿಸಿಕೊಳ್ಳಬಹುದು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ್ ಮಾತನಾಡಿ, ಜಿಲ್ಲಾ ವಕೀಲರ ಸಂಘದ ಪ್ರತಿಯೊಬ್ಬರ ಸಹಕಾರದಿಂದ ರಾಜ್ಯದಲ್ಲೇ ಅತೀ ಹೆಚ್ಚು ಪ್ರಕರಣ ಇತ್ಯರ್ಥ ಮಾಡಲು ಸಾಧ್ಯವಾಗಿದೆ. ಇದರಿಂದ ನ್ಯಾಯಾಧೀಶರ ಅರ್ಧದಷ್ಟು ಕೆಲಸದ ಹೊರೆ ಕಡಿಮೆ ಆಗಿದೆ. ವಕೀಲರ ಸಹಕಾರ ಇಲ್ಲದೇ ಹೋದಲ್ಲಿ ಅದಾಲತ್ ಯಶಸ್ಸು ಕಾಣಲು ಸಾಧ್ಯವಿಲ್ಲ. ವಕೀಲರೇ ಅನೇಕ ಪ್ರಕರಣಗಳನ್ನು ಲೋಕ್ ಅದಾಲತ್‌ಗೆ ಸೂಚಿಸಿರುವ ಉದಾಹರಣೆ ಇವೆ ಎಂದು ತಿಳಿಸಿದರು. ಫೆಬ್ರವರಿ 11, 2023ರ ಪೂರ್ವದಲ್ಲಿ ಸಂಚಾರಿ ಇ –ಚಲನ್ ಮೂಲಕ ವಿಧಿಸಲದ ದಂಡಗಳಲ್ಲಿ ಶೇ.50 ಕಡಿತಗೊಳಿಸಲಾಗಿದ್ದು, ಅದರ ಸದುಪಯೋಗ ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ವಕೀಲರ ಸಂಘದ ಜಿಲ್ಲಾ ಅಧ್ಯಕ್ಷ ಎಲ್. ಎಚ್. ಅರುಣ್‌ಕುಮಾರ್ ಮಾತನಾಡಿ, ದಾವಣಗೆರೆ ಜಿಲ್ಲೆಯಲ್ಲಿ ಅತೀ ಹೆಚ್ಚು ಪ್ರಕರಣ ಇತ್ಯರ್ಥ ಪಡಿಸಿರುವ ಕಾರಣಕ್ಕೆ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ, ನ್ಯಾಯಮೂರ್ತಿ ನರೇಂದ್ರ ಅವರು ಅಭಿನಂದನಾ ಪತ್ರ ನೀಡಿರುವುದು ಸಂತೋಷದ ಸಂಗತಿ. ಲೋಕ್ ಅದಾಲತ್ ಯಶಸ್ವಿಯಾಗಿ ನಡೆಯಲು ಎಲ್ಲರ ಪಾತ್ರವೂ ಅತೀ ಪ್ರಮುಖ ಎಂದು ತಿಳಿಸಿದರು.

ವಕೀಲರ ಸಂಘದ ಉಪಾಧ್ಯಕ್ಷ ಜಿ.ಕೆ. ಬಸವರಾಜ್, ಕಾರ್ಯದರ್ಶಿ ಎಸ್. ಬಸವರಾಜ್, ಸಹ ಕಾರ್ಯದರ್ಶಿ ಮಂಜುನಾಥ್ ಇತರರು ಸುದ್ದಿಗೋಷ್ಠಿಯಲ್ಲಿದ್ದರು.



ಚಳ್ಳಕೆರೆ ನಗರದ ಉದ್ಯಮಿ ಎಂ.ಆರ್.ಮಧುಯವರ ನಿವಾಸದಲ್ಲಿ ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಶ್ರೀಕೃಷ್ಣನನ್ನು ವಿಶೇಷ ಹೂಗಳಿಂದ ಅಲಂಕರಿಸಿ, ಕೃಷ್ಣನ ಲೀಲೆಗಳ ಬಗ್ಗೆ ಭಜನೆ ಕಾರ್ಯಕ್ರಮ ನಡೆಸಲಾಯಿತು. ಆಶಾಮಧು, ಕಲ್ಪನಾ, ನಳಿನ, ಅನುರಾಧ, ನಿರ್ಮಲ, ಭವಿತ ಮೊದಲಾವರು ಇದ್ದರು.



ಚಿತ್ರದುರ್ಗದ ಶ್ರೀ ಕೃಷ್ಣ ಜನ್ಮಾಷ್ಟಮಿಯ ಪ್ರಯುಕ್ತ ಶ್ರೀ ಸದ್ಗುರು ಕಬೀರಾನಂದ ಸ್ವಾಮಿ ವಿದ್ಯಾಪೀಠದ ಆಶ್ರಯದಲ್ಲಿನ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಆಂಗ್ಲ ಮಾಧ್ಯಮ ಶಾಲೆಯ ಎಲ್. ಕೆ. ಜಿ. ಹಾಗೂ ಯು. ಕೆ.ಜಿ ತರಗತಿಯ ಪುಟಾಣಿ ಮಕ್ಕಳಿಗೆ ಶ್ರೀಕೃಷ್ಣ ರಾಧೆಯ ವೇಷಭೂಷಣ ಕಾರ್ಯಕ್ರಮವನ್ನು ನಡೆಸಲಾಯಿತು ವಿದ್ಯಾಪೀಠದ ಅಧ್ಯಕ್ಷರಾದ ಪರಮ ಪೂಜ್ಯ ಶ್ರೀ ಶ್ರೀ ಶ್ರೀ ಶಿವಲಿಂಗಾನಂದ ಮಹಾಸ್ವಾಮಿಜಿಯವರು ಕಾರ್ಯಕ್ರಮದ ದಿವ್ಯಸಾನಿದ್ಯ ವಹಿಸಿ ಆಶೀರ್ವಚನಗಳನ್ನು ದಯಪಾಲಿಸಿದರು ಸಂಸ್ಕೃತ ಪಾಠಶಾಲೆಯ ಮುಖ್ಯ ಶಿಕ್ಷಕರಾದ ಗಣಪತಿ ಶಾಸ್ತ್ರಿ ಸರ್ ಹಾಗೂ ವಿದ್ಯಾಪೀಠದ ಎಲ್ಲಾ ಸಿಬ್ಬಂದಿ ವರ್ಗದವರು ಹಾಗೂ ಪೋಷಕರು ಮಕ್ಕಳು ಹಾಜರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ರೈತರ ಪಾಲಿಗೆ ಕಾಂಗ್ರೆಸ್ ಸರ್ಕಾರ ಶಾಪ: ಬಿಜೆಪಿ

» ಮೊದಲ ಪುಟದಿಂದ

ರೈತರಿಗೆ ವರವಾಗುವಂತಹ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಕಿಸಾನ್ ಸಮ್ಮಾನ ಯೋಜನೆ, ರೈತ ವಿದ್ಯಾನಿಧಿ, ಭೂಸಿರಿ, ಶ್ರಮ ಶಕ್ತಿ, ಎಪಿಎಂಸಿ ಕಾಯ್ದೆ, ಕೃಷಿಭೂಮಿ ಮಾರಾಟ ಕಾನೂನು, ಜಿಲ್ಲೆಗೊಂದು ಗೋಶಾಲೆ ಹೀಗೆ ಹಲವಾರು ಕಾರ್ಯಕ್ರಮ ರೂಪಿಸಿ ರೈತರ ನೆರವಿಗೆ ಬಂದಿದ್ದರು. ಆದರೆ, ಆಡಳಿತಕ್ಕೆ ಬಂದ ಕಾಂಗ್ರೆಸ್‌ಸರ್ಕಾರ ಬಿಜೆಪಿಯ ಎಲ್ಲಾ ರೈತಪರ ಯೋಜನೆಗಳನ್ನು ರದ್ದು ಪಡಿಸುವ ಮೂಲಕ ರೈತರ ಬದುಕನ್ನು ಬೀದಿಗೆ ತಳ್ಳಿದೆ ಎಂದರು.

ರೈತ ಮೋರ್ಚಾ ತಾಲ್ಲೂಕು ಅಧ್ಯಕ್ಷ ನವೀನ್ ಮಾತನಾಡಿ, ಪ್ರಸ್ತುತ ಮುಂಗಾರು ಮಳೆ ಕ್ಷೀಣಿಸಿದ ಹಿನ್ನೆಲೆಯಲ್ಲಿ ಎಲ್ಲಿಯೂ ಬೆಳೆಯಾಗಿಲ್ಲ. ಲಕ್ಷಾಂತರ ಹೆಕ್ಟೇರ್ ಪ್ರದೇಶದ ಶೇಂಗಾ ಬೆಳೆ ಸಂಪೂರ್ಣ ಒಣಗಿ ಹೋಗಿದೆ. ಯಾವುದೇ ಕೃಷಿ ಭೂಮಿಯಲ್ಲಿ ಶೇಂಗ ಬೆಳೆ ಕಾಣಸಿಗದು. ಎಲ್ಲೆಲ್ಲೂ ಹಾಹಾಕಾರ ತಲೆದೋರಿದೆ. ಲಕ್ಷಾಂತರ ರೂಪಾಯಿ ಖರ್ಚು ಮಾಡಿದ ರೈತರು ಸರ್ಕಾರದ ಕಡೆ ಎದುರು ನೋಡಿತ್ತಿದ್ದಾರೆ. ಆದರೆ, ಸರ್ಕಾರ ಮಾತ್ರ ಬರಗಾಲ ಪರಿಸ್ಥಿತಿಯನ್ನು ಗಂಭಿರವಾಗಿ ಪರಿಗಣಿಸಿಲ್ಲ. ಇದುವರೆಗೂ ಈ ತಾಲ್ಲೂಕನ್ನು ಬರಪೀಡಿತ ಪ್ರದೇಶ ವ್ಯಾಪ್ತಿಗೆ ತರಬೇಕೆಂದು ಮನವಿ ಮಾಡಿದರೂ ಸರ್ಕಾರ ನಿರ್ಲಕ್ಷ್ಯ ವಹಿಸಿದೆ. ರೈತರು ಸಾಲಸೂಲ ಮಾಡಿ ಬಿತ್ತನೆ ಮಾಡಿದ್ದು, ಬೆಳೆ ಒಣ ರೈತರ ಮುಖ ಸಹ ಬಾಡಿದೆ. ರೈತರ ಪರವಾಗಿ ಸರ್ಕಾರ ಯಾವುದೇ ವಿಚಾರವನ್ನು ಬಹಿರಂಗಪಡಿಸುತ್ತಿಲ್ಲ. ತಾಲ್ಲೂಕಿನಾದ್ಯಂತ ಬರಛಾಯೆ ಮೂಡಿದ್ದರೂ ಈ ಪ್ರದೇಶವನ್ನು ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಲು ಹಿಂದೇಟು ಹಾಕುತ್ತಿದ್ದಾರೆ. ಕಾಂಗ್ರೆಸ್ ಆಡಳಿತದಲ್ಲಿ ರೈತರ ಗೋಳು ಕೇಳುವವರು ಇಲ್ಲವಾಗಿದೆ. ರೈತರಿಗೆ ಈ ಸರ್ಕಾರ ಶಾಪವಾಗಿದೆ ಎಂದರು. ಪ್ರತಿಭಟನೆಯಲ್ಲಿ ಬಿಜೆಪಿ ಮಂಡಲ ಕಾರ್ಯದರ್ಶಿ ದಿನೇಶ್‌ರೆಡ್ಡಿ, ಯುವ ಮೋರ್ಚಾ ಮಾಜಿ ಅಧ್ಯಕ್ಷರಾದ ಟಿ.ಮಂಜುನಾಥ, ಈಶ್ವರನಾಯಕ, ಮುಂಖಡರಾದ ಜೆ.ಕೆ. ತಿಪ್ಪೇಶ್, ಆರ್.ಡಿ.ಮಂಜುನಾಥ, ಹೊಸಮನೆ ಮನೋಜ್, ಜಗದಾಂಭ, ಶಾಂತಮ್ಮ, ತಿಪ್ಪೇಸ್ವಾಮಿ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಆಯುರ್ವೇದ ಚಿಕಿತ್ಸಾಲಯಕ್ಕೆ ಆಯುಷ್ ಅಧಿಕಾರಿ ಭೇಟಿ

ನಾಯಕನಹಟ್ಟಿ : ಹೋಬಳಿಯ ತಿಮ್ಮಪ್ಪಯ್ಯನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಆಯುರ್ವೇದ ಚಿಕಿತ್ಸಾಲಯಕ್ಕೆ ಚಿತ್ರದುರ್ಗ ಜಿಲ್ಲಾ ಆಯುಷ್ ಅಧಿಕಾರಿಯಾದ ಡಾ॥ಚಂದ್ರಕಾಂತ.ಎಸ್ ಬೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ವೈದ್ಯಾಧಿಕಾರಿ ಸರಸ್ವತಿ ಆಸ್ಪತ್ರೆ ರೋಗಿಗಳ ತಪಾಸಣೆ ನಡೆಸಿ ಆಯುರ್ವೇದ ಔಷಧಿಗಳ ಬಗ್ಗೆ ಸಸ್ಯಗಳ ಚಿಕಿತ್ಸಾ ಕ್ರಮಗಳು ಸಂಪೂರ್ಣ ಮಾಹಿತಿಯನ್ನು ನೀಡಿದರು. ಜನಸಾಮಾನ್ಯರಿಗೆ ಇನ್ನೂ ಹೆಚ್ಚಿನ ಔಷಧಿಗಳು ಸೌಕಾರ್ಯಗಳನ್ನು ಒದಗಿಸುವುದಾಗಿ ಅವರು ಭರವಸೆ ನೀಡಿದರು. ಗ್ರೂಪ್–ಡಿ ಮಂಜುನಾಥ ಆಸ್ಪತ್ರೆಯ ಸುಚಿತ್ವ ಕಾಪಾಡುವಲ್ಲಿ ಯಶಸ್ವಿಯಾಗಿದ್ದಾರೆಎಂದುಅವರುಮಾತನಾಡಿದರು. ತಿಮ್ಮಪ್ಪಯ್ಯನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಆಯುರ್ವೇದ ವೈದ್ಯಾಧಿಕಾರಿಯಾದ ಡಾ॥ಸರಸ್ವತಿ ಮಾತನಾಡಿ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯದಲ್ಲಿ ಎಲ್ಲಾ ರೀತಿಯ ರೋಗಗಳ ತಪಾಸಣೆ ನಡೆಸಿ ಆಯುರ್ವೇದ ಔಷಧಿಗಳನ್ನು ನೀಡಿ ಆಯುರ್ವೇದ ಆಹಾರ ವಿಹಾರ ಪದ್ಧತಿ ಮತ್ತು ಜೀವನ ಕ್ರಮ ಕೈಗೊಳ್ಳಲು ಮಾಹಿತಿ ನೀಡಲಾಗುವುದು. ಆರೋಗ್ಯ ಶಿಬಿರಗಳನ್ನು ಮಾಡಿ ಮಕ್ಕಳ, ಗರ್ಭಿಣೀಯರ ತಪಾಸಣೆಯನ್ನು ಮಾಡುವುದಾಗಿ ಡಾ॥ಸರಸ್ವತಿ ತಿಳಿಸಿದರು.



## “ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ, ಕರ್ನಾಟಕ’ ಆಯ್ಕೆಗೆ ಅರ್ಜಿ ಆಹ್ವಾನ

ಚಿತ್ರದುರ್ಗ: ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ “ಮಹಾತ್ಮಗಾಂಧೀ ಸೇವಾ ಪ್ರಶಸ್ತಿ–ಕರ್ನಾಟಕ"ಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರಶಸ್ತಿಯನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯನ್ನು ರಚಿಸಲಾಗುವುದು. 2023 ರ ಅಕ್ಟೋಬರ್ 02 ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು.ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು.

**ಪ್ರಮುಖ ಸುದ್ದಿ**

# ಮಲ್ಲಿಕಾರ್ಜುನಪ್ಪ ಎಲ್ಲರ ಮನದಲ್ಲಿದ್ದಾರೆ: ಸ್ವಾಮೀಜಿ

» ಚಿತ್ರದುರ್ಗ

ಪತಂಜಲಿ ಯೋಗ ಸಮಿತಿ ಮೂಲಕ ಎಲ್ಲರಿಗೂ ಯೋಗ ಅಭ್ಯಾಸ ಮಾಡಿಸುತ್ತಿದ್ದ ಮಲ್ಲಿಕಾರ್ಜುನಪ್ಪ ಎಲ್ಲರ ಮನದಲ್ಲಿ ಉಳಿದ್ದಾರೆಂದು ಕಬೀರಾನಂದಾಶ್ರಮದ ಶಿವಲಿಂಗಾನಂದ ಮಹಾಸ್ವಾಮಿಗಳು ಸ್ಮರಿಸಿದರು.

ಕಳೆದ ತಿಂಗಳು 29 ರಂದು ನಿಧನರಾದ ಮಲ್ಲಿಕಾರ್ಜುನಪ್ಪನವರ ಆತ್ಮ ಶಾಂತಿಗಾಗಿ ಚಳ್ಳಕೆರೆ ಗೇಟ್‌ನಲ್ಲಿರುವ ಎಸ್.ಎಸ್. ಕೆ.ಎಸ್.ಸಮುದಾಯ ಭವನದಲ್ಲಿ ಶುಕ್ರವಾರ ಏರ್ಪಡಿಸಲಾಗಿದ್ದ ನುಡಿನಮನ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಮಲ್ಲಿಕಾರ್ಜುನಪ್ಪನವರು ಅಂಚೆ ಇಲಾಖೆಯಲ್ಲಿ ಹೆಡ್ ಪೋಸ್ಟ್ ಮಾಸ್ಟರ್ ಆಗಿದ್ದುಕೊಂಡು ಅನೇಕ ಸಮಾಜಮುಖಿ ಕೆಲಸಗಳಲ್ಲಿ ತೊಡಗಿಕೊಳ್ಳುತ್ತಿದ್ದರು. ಪ್ರತಿಯೊಬ್ಬರು ಯೋಗ ಮಾಡಿ ಆರೋಗ್ಯವಂತರಾಗಿರಬೇಕೆಂಬ ಸಂದೇಶವನ್ನು ನೀಡುವ ಮೂಲಕ



ಮನೆ ಮಾತಾಗಿದ್ದಾರೆ. ಹುಟ್ಟುವುದು ಗೊತ್ತಾಗುತ್ತದೆ. ಆದರೆ ಮರಣ ಯಾರಿಗೂ ಗೊತ್ತಾಗುವುದಿಲ್ಲ.ಮಲ್ಲಿಕಾರ್ಜುನಪ್ಪನವರು ಇದ್ದಕ್ಕಿಂದತೆ ಎಲ್ಲರನ್ನು ಬಿಟ್ಟು ಅಗಲಿದ್ದಾರೆ. ಆದರೆ ಅವರ ಚಿಂತನೆಗಳು ಮಾತ್ರ ಜೀವಂತವಾಗಿದೆ. ಮನುಷ್ಯ ಎಷ್ಟು ವರ್ಷ ಬದುಕಿದ್ದ ಎನ್ನುವುದು ಮುಖ್ಯವಲ್ಲ. ಜೀವಿತಾವಧಿಯಲ್ಲಿ ನಾಲ್ಕಾರು ಜನಕ್ಕೆ ಪ್ರಯೋಜನವಾಗುವ ಯಾವ ಕೆಲಸ ಮಾಡಿದ್ದ ಎನ್ನುವುದು ನೆನಪಿನಲ್ಲಿ ಉಳಿಯುತ್ತದೆ. ಜೀವನ ಅಶಾಶ್ವತ ಎಂದು ಹೇಳಿದರು.

ಮಾಜಿ ಸಂಸದ ಜನಾರ್ಧನಸ್ವಾಮಿ ಮಾತನಾಡಿ ಅಂಚೆ ಇಲಾಖೆಯ ನೌಕರಿ ಜೊತೆಯಲ್ಲಿಯೇ ಯೋಗಾಭ್ಯಾಸ ಮಾಡಿಸುತ್ತಿದ್ದ ಮಲ್ಲಿಕಾರ್ಜುನಪ್ಪನವರಿಂದ ಸಾವಿರಾರು ಜನ ಒಂದಲ್ಲ ಒಂದು ರೀತಿಯ ಅನುಕೂಲ ಪಡೆದುಕೊಂಡಿದ್ದಾರೆ. ಸರಳತನವನ್ನು ಮೈಗೂಡಿಸಿಕೊಂಡಿದ್ದ ಅವರಿಗೆ ಶಿಕ್ಷಣವೊಂದೆ ಜೀವನಕ್ಕೆ ಆಧಾರ ಎನ್ನುವುದು ಚನ್ನಾಗಿ ಗೊತ್ತಿದ್ದರಿಂದಲೇ ಇಬ್ಬರು ಮಕ್ಕಳನ್ನು ವಿದ್ಯಾವಂತರನ್ನಾಗಿಸಿದ್ದಾರೆ. ರಸ್ತೆ, ನೀರು, ಚರಂಡಿ, ದೀಪ ಹೀಗೆ ಸಾರ್ವಜನಿಕರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಕುರಿತು ಯಾವಾಗಲೂ ನನ್ನ ಜೊತೆ ಚರ್ಚಿಸುತ್ತಿದ್ದರು. ವೈಯಕ್ತಿಕವಾಗಿ ನನ್ನ ಬಳಿ ಏನನ್ನು ಅವರು ಕೇಳಲಿಲ್ಲ. ಎಲ್ಲರೂ ಒತ್ತಡದ ನಡುವೆ ಜೀವಿಸುತ್ತಿರುವ ಇಂದಿನ ಕಾಲದಲ್ಲಿ ಯೋಗಕ್ಕೆ ಹೆಚ್ಚಿನ ಮಹತ್ವ ಕೊಟ್ಟಿದ್ದ ಮಲ್ಲಿಕಾರ್ಜುನಪ್ಪನವರು ಎಲ್ಲರಿಗೂ ಯೋಗ ಹೇಳಿಕೊಡುತ್ತ ಸಾರ್ಥಕ ಜೀವನ ನಡೆಸಿದ್ದಾರೆಂದು ನೆನಪಿಸಿಕೊಂಡರು. ಚಳ್ಳಕೆರೆ ಂು ಕುದಾಪುರ ಸಮೀಪ ಡಿ.ಆರ್.ಡಿ.ಓ. ಆರಂಭಗೊಂಡಿರುವುದರ ಹಿಂದೆ ಮಲ್ಲಿಕಾರ್ಜುನಪ್ಪನವರ ಕಾಳಜಿಯಿದೆ. ಮಧ್ಯ ಕರ್ನಾಟಕದ ಬಯಲುಸೀಮೆ ಚಿತ್ರದುರ್ಗಕ್ಕೆ ಭದ್ರಾಮೇಲ್ದಂಡೆ ಯೋಜನೆ ಜಾರಿಗಾಗಿಯೂ ಸಾಕಷ್ಟು ಸಲ ಪ್ರಸ್ತಾಪಿಸಿದ್ದರು. ಮಲ್ಲಿಕಾರ್ಜುನಪ್ಪನವರು ನಮ್ಮನ್ನೆಲ್ಲಾ ಅಗಲಿರಬಹುದು. ಆದರೆ ಅವರ ತತ್ವ ಚಿಂತನೆ, ವಿಚಾರಧಾರೆಗಳು ಇನ್ನು ಜೀವಂತವಾಗಿದೆ ಎಂದರು.

ಇತಿಹಾಸ ಸಂಶೋಧಕ ಡಾ.ಬಿ.ರಾಜಶೇಖರಪ್ಪ ವೇದಿಕೆಯಲ್ಲಿದ್ದರು.ಆರ್ಥಿಕ ಚಿಂತಕ ಜಿ.ಎನ್.ಮಲ್ಲಿಕಾರ್ಜುನಪ್ಪ, ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಕೆ.ಎಂ.ವೀರೇಶ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ರವಿಕುಮಾರ್ ಸೇರಿದಂತೆ ಅನೇಕ ಯೋಗಪಟುಗಳು, ಅಂಚೆ ಇಲಾಖೆ ನೌಕರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಚಳ್ಳಕೆರೆಯಲ್ಲಿ ನಾಳೆ ಮಾಧ್ಯಮ ಕಾರ್ಯಾಗಾರ

» ಚಳ್ಳಕೆರೆ

ಯುವ ಉತ್ಸಾಹಿ ಪದವೀಧರ ವಿದ್ಯಾರ್ಥಿಗಳ ಸಮೂಹವನ್ನು ಪತ್ರಿಕಾ ರಂಗಕ್ಕೆ ಆಹ್ವಾನಿಸಿ ಪರಿಚಯಿಸುವ ಹಾಗೂ ಯುವ ಪತ್ರಕರ್ತರಿಗೆ ಮಾಧ್ಯಮ ರಂಗದ ಕಾರ್ಯ ಚಟುವಟಿಕೆಗಳ ಬಗ್ಗೆ ತಿಳಿಸಿಕೊಡುವ ದೃಷ್ಟಿಯಿಂದ ಗಡಿನಾಡು ಪತ್ರಕರ್ತರ ಕಾರ್ಯಾಗಾರ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಮಾಧ್ಯಮ ಮಹಾ ಒಕ್ಕೂಟದ ರಾಜ್ಯಾಧ್ಯಕ್ಷ ಕೆ. ಶಿವಕುಮಾರ್ ಹಾಗೂ ಪ್ರಧಾನ ಕಾರ್ಯದರ್ಶಿ ಈಶ್ವರಪ್ಪ ತಿಳಿಸಿದರು.ಸೆ.10ನೇ ಭಾನುವಾರದಂದು ನಗರದ ರೋಟರಿ ಬಾಲ ಭವನದಲ್ಲಿ ಕರ್ನಾಟಕ ಮಾಧ್ಯಮ ಮಹಾ ಒಕ್ಕೂಟ ಬೆಂಗಳೂರು, ಚಿತ್ರದುರ್ಗ,ಹಾಗೂ ದಾವಣಗೆರೆ ಜಿಲ್ಲಾ ಘಟಕಗಳ ಸಹಯೋಗದೊಂದಿಗೆ ಒಂದು ದಿನದ ಗಡಿನಾಡು ಪತ್ರಕರ್ತರ ಕಾರ್ಯಾಗಾರ ಶಿಬಿರವನ್ನು ಹಮ್ಮಿಕೊಂಡಿದ್ದು ಕಾರ್ಯಕ್ರಮದ ಉದ್ಘಾಟನೆಯನ್ನು ಶಾಸಕ ಟಿ ರಘುಮೂರ್ತಿ ನೆರವೇರಿಸಲಿದ್ದಾರೆ.ಗಡಿನಾಡು ಪತ್ರಕರ್ತರ ಕಾರ್ಯಾಗಾರ ಶಿಬಿರಕ್ಕೆ ಖ್ಯಾತ ಸಾಹಿತಿ ಹಾಗೂ ಸಂಸ್ಕೃತ ಚಿಂತಕರಾದ ವಡ್ಡಿಗೆರೆ ನಾಗರಾಜಯ್ಯ ಚಾಲನೆ ನೀಡಲಿದ್ದು, ಅಧ್ಯಕ್ಷತೆಯನ್ನು ಮಾಧ್ಯಮ ಮಹಾ ಒಕ್ಕೂಟದ ದಾವಣಗೆರೆ ಜಿಲ್ಲಾ ಘಟಕದ ಅಧ್ಯಕ್ಷ ಮಹಾಂತೇಶ್ ರಾವ್ ಸುರ್ವೆ ವಹಿಸಲಿದ್ದಾರೆ. ಕಾನೂನು ಮತ್ತು ಪತ್ರಿಕೋದ್ಯಮ ಕುರಿತು ವಿಶೇಷ ಉಪನ್ಯಾಸವನ್ನು ಚಿತ್ರದುರ್ಗ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ವೈ ತಿಪ್ಪೇಸ್ವಾಮಿ ಹಾಗೂ ಗಡಿನಾಡು ಪತ್ರಕರ್ತರ ಸಮಸ್ಯೆಗಳ ಕುರಿತು ನ್ಯೂಸ್ ಪೇಪರ್ ಅಸೋಸಿಯೇಷನ್ ಆಫ್ ಇಂಡಿಯಾ ಅಧ್ಯಕ್ಷ ಬಿವಿ ವಾಸದೇವ ವಿಶೇಷ ಉಪನ್ಯಾಸ ನೀಡಲಿದ್ದಾರೆ.ಮುಖ್ಯ ಅತಿಥಿಗಳಾಗಿ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ಎ ನಾರಾಯಣಸ್ವಾಮಿ ವಿಧಾನಪರಿಷತ್ ಸದಸ್ಯ ಕೆಎಸ್ ನವೀನ್ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಎಂಜೆ ರಾಘವೇಂದ್ರ ವಾಣಿಜ್ಯೋತಿ ಸುನಿಲ್ ಕುಮಾರ್ ಲೋಕಾಯುಕ್ತ ಎಸ್ಪಿ ವಾಸುದೇವ್ ವಿಶೇಷ ಆಹ್ವಾನಿತರಾಗಿ ಚಳ್ಳಕೆರೆ ಪೊಲೀಸ್ ಉಪಾಧ್ಯಕ್ಷರಾದ ಟಿ ವಿ ರಾಜಣ್ಣ, ತಿಪ್ಪಣ್ಣ ಮರಿಕುಂಟೆ ಕೆ.ಎಸ್ ಸುರೇಶ್ ಪಾಲ್ಗೊಳ್ಳಲಿದ್ದಾರೆ. ಗಡಿನಾಡು ಪತ್ರಕರ್ತರ ಕಾರ್ಯಾಗಾರ ಶಿಬಿರದಲ್ಲಿ ಪಾಲ್ಗೊಳ್ಳಲು ಇಚ್ಚಿಸುವ ಪತ್ರಿಕೋದ್ಯಮ ವಿದ್ಯಾರ್ಥಿಗಳು ಹಾಗೂ ಯುವ ಪತ್ರಕರ್ತರು ಹೆಸರನ್ನು ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9845828872/ 9886541749 ಸಂಪರ್ಕಿಸಬಹುದಾಗಿದೆ.

### ಇಬ್ಬರು ಅಸಹಾಯಕರ ಮೈತ್ರಿ: ಜಗದೀಶ್ ಶೆಟ್ಟರ್

ಹುಬ್ಬಳ್ಳಿ: ಇಬ್ಬರು ಅಸಹಾಯಕರು ಸೇರಿ ಮೈತ್ರಿ ಮಾಡಿಕೊಳ್ಳುತ್ತಿದ್ದಾರೆ ಎಂದು ಜೆಡಿಎಸ್ – ಬಿಜೆಪಿ ಮೈತ್ರಿ ವಿಚಾರಕ್ಕೆ ಮಾಜಿ ಸಿಎಂ ಜಗದೀಶ್ ಶೆಟ್ಟರ್ ವ್ಯಂಗ್ಯವಾಡಿದರು. ಲೋಕಸಭಾ ಚುನಾವಣೆಯಲ್ಲಿ ಮೈತ್ರಿ ಮಾಡಿಕೊಳ್ಳುವುದು ಜೆಡಿಎಸ್ ಮತ್ತು ಬಿಜೆಪಿಗೆ ಬಿಟ್ಟ ವಿಚಾರ. ಹಿಂದೆಯೂ ಮೈತ್ರಿ ಮಾಡಿಕೊಳ್ಳುತ್ತೇವೆ ಅಂದರು ನಂತರ ಅದಕ್ಕೆ ಬ್ರೇಕ್ ಆಯ್ತು. ವಿಧಾನಸಭೆ ಚುನಾವಣೆಯಲ್ಲಿ ಇಬ್ಬರು ಪರಸ್ಪರ ಫೈಟ್ ಮಾಡಿದ್ದರು. ಈಗ ಮತ್ತೆ ಮೈತ್ರಿ ವಿಚಾರ ಮಾತಾಡುತ್ತಿದ್ದಾರೆ. ಅನುಕೂಲವಿದ್ದಾಗ ಮೈತ್ರಿ ಮಾಡಿಕೊಳ್ಳುವುದು, ಅನಾನುಕೂಲವಾದಾಗ ಮೈತ್ರಿಯಿಂದ ಹಿಂದೆ ಸರಿಯುವುದು. ಈ ರೀತಿ ಮಾಡಿದಾಗ ಜನರ ನಂಬಿಕೆಯನ್ನು ಕಳೆದುಕೊಳ್ಳುತ್ತಾರೆ. ಜೊತೆಗೆ ಆಯಾ ಪಕ್ಷಗಳ ಕ್ರೆಡಿಬಿಲಿಟಿ ಸಹ ಹೋಗುತ್ತೆ ಎಂದರು.

### ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಳ್ಳುತ್ತೇವೆ; ಬಿಎಸ್ ಯಡಿಯೂರಪ್ಪ

ಬೆಂಗಳೂರು: ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಬಗ್ಗೆ ಉಭಯ ಪಕ್ಷಗಳ ವರಿಷ್ಠರ ಜೊತೆ ಮಾತುಕತೆ ನಡೆದಿದೆ. ನಮ್ಮ ವರಿಷ್ಠರ ಜೊತೆ ಜೆಡಿಎಸ್ ವರಿಷ್ಠರು ಮಾತನಾಡಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಳ್ಳುತ್ತೇವೆ. ಜೆಡಿಎಸ್‌ಗೆ ನಾಲ್ಕು ಸ್ಥಾನ ಬಿಟ್ಟುಕೊಡುವ ಬಗ್ಗೆ ಮಾತುಕತೆ ನಡೆದಿದೆ. ಮೈತ್ರಿಯಿಂದ ಲೋಕಸಭಾ ಚುನಾವಣೆಯಲ್ಲಿ ಮತ್ತಷ್ಟು ಶಕ್ತಿ ಬರಲಿದೆ. ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ 26 ಸ್ಥಾನ ಗೆಲ್ಲುವ ವಿಶ್ವಾಸವಿದೆ ಎಂದು ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಹೇಳಿದರು.

### ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ನಿಷೇಧಾಜ್ಞೆ

ದಾವಣಗೆರೆ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸೆಪ್ಟೆಂಬರ್ 9 ರಂದು ನಡೆಸಲ್ಪಡುವ ಡಿಸಿಇಟಿ ಪರೀಕ್ಷೆಯನ್ನು ಸುಗಮವಾಗಿ ನಡೆಸಲು 144 ಸೆಕ್ಷನ್ ಜಾರಿಗೊಳಿಸಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಆದೇಶಿಸಿದ್ದಾರೆ. ಡಿಸಿಇಟಿ–2023ರ ಸಾಮಾನ್ಯ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಪರೀಕ್ಷೆಗಳು ದಾವಣಗೆರೆ ನಗರದಲ್ಲಿ 2 ಪರೀಕ್ಷಾ ಕೇಂದ್ರಗಳಾದ ಮೋತಿ ವೀರಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಕೇಂದ್ರಗಳಲ್ಲಿ ನಡೆಯಲಿರುವುದರಿಂದ ಪರೀಕ್ಷೆಗಳು ಸುಗಮವಾಗಿ ನಡೆಯುವಂತೆ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯನ್ನು ಸಾರ್ವಜನಿಕ ಪ್ರವೇಶಕ್ಕೆ ನಿಷೇಧಿತ ಪ್ರದೇಶವೆಂದು ತಿಳಿಸಿದ್ದಾರೆ.

# ತಾಲ್ಲೂಕು ಮಟ್ಟದ ಪೋಷಣ್ ಮಾಸಾಚರಣೆ

» ದಾವಣಗೆರೆ

ಮಿಷನ್ ಇಂದ್ರಧನುಷ್ 0.5 ಅಭಿಯಾನದ ಎರಡನೇ ಹಂತ ಪ್ರಾರಂಭವಾಗುತ್ತಿದ್ದು, ಲಸಿಕೆಗಳನ್ನು ಹಾಕಿಸದೇ ಇರುವ ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆಗಳನ್ನು ಹಾಕಿಸಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆರ್.ಸಿ.ಹೆಚ್ ಅಧಿಕಾರಿ ಡಾ. ರೇಣುಕಾ ಆರಾಧ್ಯ ತಿಳಿಸಿದರು.

ಗುರುವಾರ ಭರತ್ ಕಾಲೋನಿ, 9 ನೇ ಕ್ರಾಸ್ ಸೇವಾಲಾಲ್ ದೇವಸ್ಥಾನದಲ್ಲಿ ಪೋಷಣ್ ಅಭಿಯಾನ ಯೋಜನೆಯಡಿ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕಾರ್ಯಕ್ರಮದ ಉದ್ದೇಶ ಪೌಷ್ಠಿಕ ಆಹಾರದ ಬಗ್ಗೆ ಜನರಿಗೆ ಅರಿವು ಮೂಡಿಸಿವುದಾಗಿದೆ. ಇಲ್ಲಿ ಪಡೆದ ಮಾಹಿತಿ ತಿಳಿದುಕೊಂಡು ಆರೋಗ್ಯ ರಕ್ಷಣೆಗೆ ಅಗತ್ಯವಾದ ಆಹಾರ ಸೇವಿಸಬೇಕು. ಹಾಗೂ ಹೆಣ್ಣು ಮಕ್ಕಳಿಗೆ 21 ವರ್ಷ ತುಂಬಿದ ನಂತರವೇ ಮದುವೆ ಮಾಡಬೇಕು, ಆಗ ಗರ್ಭಪಾತ ಸಂಖ್ಯೆ ಕಡಿಮೆಯಾಗುತ್ತದೆ ಎಂದು ತಿಳಿಸಿದರು.

ತಾಲ್ಲೂಕು ವೈದ್ಯಾಧಿಕಾರಿ ಡಾ. ದೇವರಾಜ್ ಮಾತನಾಡಿ ಗರ್ಭಿಣಿಯರಿಗೆ ಹಿಮೋಗ್ಲೋಬಿನ್ 10 ಗ್ರಾಂ ಇರಬೇಕು, ಐರನ್ ಮತ್ತು ಕ್ಯಾಲ್ಸಿಯಂ ಮಾತ್ರೆಗಳನ್ನು ಸಮಯಕ್ಕೆಸರಿಯಾಗಿ ತೆಗಡೆದುಕೊಳ್ಳಬೇಕು ಮತ್ತು ಪ್ರತಿಯೊಬ್ಬ ಗರ್ಭಿಣಿ ತನ್ನ ಗರ್ಭಾವಸ್ಥೆಯಲ್ಲಿ 10 ಕೆ.ಜಿ. ತೂಕ ಹೆಚ್ಚಳವಾಗಬೇಕು ಆಗ ಆರೋಗ್ಯವಂತ ಮಗು ಜನಿಸುತ್ತದೆ ಎಂದು ತಿಳಿಸಿದರು.



ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಮತಿ ಪ್ರಿಯದರ್ಶಿನಿ ಮಾತನಾಡಿ ಪೋಷಣ್ ಅಭಿಯಾನ ಯೋಜನೆಯು 2018ರಲ್ಲಿ ಪ್ರಾರಂಭವಾಗಿದೆ. ಪ್ರತಿ ತಿಂಗಳು ಸೆಪ್ಟಂಬರ್ ಮಾಹೆಯ 1 ನೇ ತಾರೀಖಿನಿಂದ 30 ನೇ ತಾರೀಖಿನವರೆಗೆ ಪೋಷಣ್ ಮಾಸಾಚರಣೆ ಹೆಸರಿನಲ್ಲಿ ಪ್ರತಿ ವರ್ಷವು ಕಾರ್ಯಕ್ರಮವನ್ನು ಮಾಡುತ್ತಾ ಬಂದಿದ್ದೇವೆ. ಈ ಯೋಜನೆಯಡಿ ಬರುವ ಪೋಷಣೆ ಟ್ರಾಕರ್‌ನಲ್ಲಿ ಮಕ್ಕಳನ್ನು ತೂಕ ಮಾಡಿ ಬರುವ ಸ್ಯಾಮ್ ಮಕ್ಕಳನ್ನು ಎನ್. ಆರ್.ಸಿ ಕೇಂದ್ರಕ್ಕೆ 14 ದಿನ ದಾಖಲಿಸಿ ಮಗುವನ್ನು ಅಪೌಷ್ಠಿಕತೆಯಿಂದ ಪೌಷ್ಠಿಕತೆಗೆ ತರುತ್ತೇವೆ. ಸ್ತನ್ಯಪಾನ ಸಪ್ತಾಹ, ಸಮುದಾಯ ಆಧಾರಿತ ಚಟುವಟಿಕೆಗಳನ್ನು ಮಾಡುವ ಮೂಲಕ ಜನರಿಗೆ ಅರಿವು ಮೂಡಿಸುತ್ತೇವೆ ಎಂದು ತಿಳಿಸಿದರು. ಮಕ್ಕಳ ತಜ್ಞೆ ಡಾ. ಚೈತಾಲಿ ಎನ್.ಎಸ್ ಮಾತನಾಡಿ ಗರ್ಭಿಣಿ ತಾಯಿಯ ಪೌಷ್ಠಿಕ ಮಟ್ಟದ ಆಧಾರದ ಮೇಲೆ ಹುಟ್ಟುವ ಮಗುವಿನ ಆರೋಗ್ಯ ಹಾಗೂ ಪೌಷ್ಠಿಕ ಮಟ್ಟ ನಿರ್ಧಾರವಾಗುತ್ತದೆ. ರಕ್ತ ಹೀನತೆಯು ಗರ್ಭಿಣಿ, ಬಾಣಂತಿ ಹಾಗೂ ಕಿಶೋರಿಯರಲ್ಲಿ ಒಂದು ಜ್ವಲಂತ ಸಮಸ್ಯೆಯಾಗಿದೆ. ಪ್ರತಿ ದಿನ ಸಮತೋಲನ ಆಹಾರವನ್ನು ಸೇವಿಸುವುದರಿಂದ ಮಾತ್ರ ಪರಿಣಾಮಕಾರಿಯಾಗಿ ರಕ್ತ ಹೀನತೆಯನ್ನು ತಡೆಗಟ್ಟಬಹುದು. ಗರ್ಭಾವಸ್ಥೆಯಲ್ಲಿ ತಾಯಂದಿರನ್ನುಸೀಮಂತಕಾರ್ಯದಂತಹ ಕಾರ್ಯಕ್ರಮಗಳನ್ನು ಮಾಡುವುದರಿಂದ ಅವರು ಸಂತೋಷವಾಗಿರುತ್ತಾರೆ, ತಾಯಿ ಹಾಲಿಗಿಂತ ಶ್ರೇಷ್ಠ ಆಹಾರವಿಲ್ಲ, ಮಗು ಹುಟ್ಟಿದ 6 ತಿಂಗಳವರೆಗೆ ನಂತರ ಮಗುವಿಗೆ ತಾಯಿಯ ಹಾಲು ಸಾಕಾಗುವುದಿಲ್ಲವಾದ್ದರಿಂದ ಮೇಲಿನ ಆಹಾರವನ್ನು ಹಂತಹಂತವಾಗಿ ಕೊಡಲು ಪ್ರಾರಂಭಿಸಬೇಕು. ಪೌಷ್ಠಿಕತೆ ವಿಚಾರವಾಗಿ ತಾವು ತಿಳಿದುಕೊಂಡಿರುವ ಮಾಹಿತಿಯನ್ನು ಬೇರೆಯವರಿಗೆ ತಿಳಿಸಿ ಹೆಚ್ಚಿನ ಪ್ರಚಾರ ನೀಡಬೇಕೆಂದು ತಿಳಿಸಿದರು. ಬಿ.ಹೆಚ್.ಇ ಉಮಾಪತಿ ಹೆಚ್. ಆರೋಗ್ಯವಂತ ಮಗು ಹೇಗಿರಬೇಕು & ಗರ್ಭಿಣಿಯರು ಸೇವಿಸಬೇಕಾದ ಆಹಾರಗಳ ಕುರಿತು, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಟಚಲಕುಮಾರ್ ಪಿ.ಎಸ್ ಕಾರ್ಯಕ್ರಮದಲ್ಲಿ ಭಾಗವಹಿಸಿದ ಫಲಾನುಭವಿಗಳಿಗೆ ಪೋಷಣ್ ಅಭಿಯಾನ ಮಹತ್ತವದ ಬಗ್ಗೆ ವಿಸ್ತಾರವಾಗಿ ತಿಳಿಸಿದರು.

**ವಿಶೇಷ ಕಾರ್ಯಕ್ರಮಗಳು :** ಕಾರ್ಯಕ್ರಮದಲ್ಲಿ ವಿಶೇಷವಾಗಿ ಆಯೋಜಿಸಲಾಗಿದ್ದ ವಿವಿಧ ಆಹಾರ ಪದಾರ್ಥಗಳಿಂದ ತಯಾರಿಸಿದಂತಹ ಪೌಷ್ಠಿಕ ಆಹಾರ ಪದಾರ್ಥಗಳ ಪದರ್ಶನ, ಗರ್ಭಿಣಿಯರಿಗೆ ಸೀಮಂತ ಕಾರ್ಯ ಹಾಗೂ ಆರೋಗ್ಯವಂತ ಮಕ್ಕಳಿಗೆ ಬೇಬಿ ಶೋ ಕಾರ್ಯಕ್ರಮವನ್ನು ಏರ್ಪಡಿಸಿ ಪ್ರಶಸ್ತಿಗಳನ್ನು ವಿತರಿಸಲಾಯಿತು.

ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮೇಲ್ವಿಚಾರಕಿ ಶ್ರೀಮತಿ.ಸುಧಾ ಮಕರಿ ಮತ್ತು ಕವಿತಾ ಅನ್ವೇರಿ ಗರ್ಭಿಣಿಯರು, ಬಾಣಂತಿಯರು, ಫಲಾನುಭವಿಗಳು, ಮೇಲ್ವಿಚಾರಕಿಯರು, ಪೋಷಣ್ ಕೋ ಆರ್‌ಡಿನೇಟರ್, ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಗುಣಮಟ್ಟದ ಶಿಕ್ಷಣ ನೀಡುವ ಶಿಕ್ಷಕ ಸಮಾಜಕ್ಕೆ ಸದಾ ಆದರ್ಶ: ಡಿವೈಎಸ್ಪಿ

» ಚಳ್ಳಕೆರೆ

ರಾಷ್ಟ್ರದ ಸಂವಿಧಾನ ನಮ್ಮ ಆಡಳಿತದ ಬಗ್ಗೆ ನಮಗೆ ಮಾರ್ಗದರ್ಶನ ಮಾಡುತ್ತಿದೆ. ಅದೇ ರೀತಿ ಸಮಾಜದ ಆರ್ಥಿಕ ಸಬಲತೆ, ಸುಧಾರಣೆ ಹಾಗೂ ನಾಗರೀಕ ಸೌಲಭ್ಯಗಳು ನಮಗೆ ದೊರೆಯಲು ಕಾರಣವಾಗಿರುವುದು ನಮ್ಮ ಶಿಕ್ಷಣ. ಶಿಕ್ಷಣ ನೀಡಿದ ಶಿಕ್ಷಕರ ವರ್ಗ ಸದಾಕಾಲ ಎಲ್ಲರಿಗೂ ಆದರ್ಶಮಯರು ಎಂದು ಡಿವೈಎಸ್ಪಿ ರಾಜಣ್ಣ ತಿಳಿಸಿದರು.

ಅವರು, ನಗರದ ರೋಟರಿ ಬಾಲಭವನದಲ್ಲಿ ಶಿಕ್ಷಕರ ದಿನಾಚರಣೆ ಹಿನ್ನೆಲೆಯಲ್ಲಿ ರೋಟರಿ ಕ್ಲಬ್ ನಗರದ ವಿವಿಧ ಶಾಲೆಗಳ ಪ್ರತಿಭಾನ್ವಿತ ಶಿಕ್ಷಕರನ್ನು ಗುರುತಿಸಿ ಗೌರವಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಹಲವಾರು ಕಾರ್ಯಕ್ರಮಗಳನ್ನು ನಾವು ಪ್ರತಿನಿತ್ಯ ನಡೆಸುತ್ತೇವೆ. ಆದರೆ ಇಂದು ನಮ್ಮ ಬದುಕಿಗೆ ಭದ್ರಬುನಾದಿ ಹಾಕಿದ ಶಿಕ್ಷಕರ ಸಮೂಹವನ್ನು ಸನ್ಮಾನಿಸುತ್ತಿರುವುದು ಸಂತಸದ ವಿಷಯ. ರೋಟರಿ ಕ್ಲಬ್ ವತಿಯಿಂದ ಉತ್ತಮ ಶಾಲೆಯೂ ಸಹ ಇರುವುದು ಹೆಚ್ಚು ಸಂತೋಷ ತಂದಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಶಿಕ್ಷಣ ಇಲಾಖೆಯಲ್ಲಿ ಹಲವಾರು ದಶಕಗಳಿಂದ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ತಾಲ್ಲೂಕಿನ ಶೈಕ್ಷಣಿಕ ಅಭಿವೃದ್ದಿಗೆ ತಮ್ಮದೇಯಾದ ಕೊಡುಗೆ ನೀಡಿದ್ದಾರೆ. ಪ್ರತಿಯೊಂದು ಶಾಲೆಯಲ್ಲೂ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವಲ್ಲಿ ನಮ್ಮ ಶಿಕ್ಷಕರು ಯಶಸ್ವಿ ಹೆಜ್ಜೆ ಇಟ್ಟಿದ್ದಾರೆ. ರೋಟರಿ ಕ್ಲಬ್ ಇಂತಹ ಶಿಕ್ಷಕರಿಗೆ ಸನ್ಮಾನ ಮಾಡುವ ಮೂಲಕ ತನ್ನ ಜವಾಬ್ದಾರಿಯನ್ನು ಪ್ರದರ್ಶಿಸಿದೆ. ಇಲಾಖೆಪರವಾಗಿ ಅಭಿನಂದಿಸುವೆ ಎಂದರು.



ರೋಟರಿ ಕ್ಲಬ್ ಅಧ್ಯಕ್ಷ ಕೆ.ನಾಗೇಶ್ ಮಾತನಾಡಿ, ರೋಟರಿ ಕ್ಲಬ್ ಕಳೆದ ಹಲವಾರು ವರ್ಷಗಳಿಂದ ಸಾಮಾಜಿಕ ಚಟುವಟಿಕೆಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿದೆ. ಆರೋಗ್ಯ ಜಾಗೃತಿ, ಸ್ವಚ್ಚತೆ ಮುಂತಾದ ಕಾರ್ಯಗಳು ನಿರಂತರ ನಡೆಯುತ್ತಿವೆ. ಆದರೆ, ಇಂದಿನ ಎಲ್ಲಾ ಕಾರ್ಯಚಟುವಟಿಕೆಗಳಿಗೆ ನಾವು ಪಡೆದ ಶಿಕ್ಷಣ ನಮಗೆ ಶಿಕ್ಷಣ ನೀಡಿದ ಗುರುಗಳು ಎಂದೂ ಆದರ್ಶ ಎಂದರು.

ಶಿಕ್ಷಕಿಯರಾದ ಯಶೋಧಮ್ಮ, ಡಿ.ಎಸ್.ವಿಶ್ವನಾಥ, ಶಂಶಾದ್‌ಬೇಗಂ, ನಾಗರತ್ಮ, ತ್ರಿವೇಣಿ, ಶೈಲಜಾ, ಜ್ಯೋತಿ, ರೂಪಾ, ಪೂರ್ಣಿಮಾ, ಕೆ.ಲಲಿತಕುಮಾರಿ, ಶಹಿನಾಬಿ, ಕಾವ್ಯ, ಆರ್.ಚಂದ್ರಶೇಖರ್‌ರವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ರೋಟೇರಿಯನ್ ಸಿ.ಎಸ್.ಪ್ರಹ್ಲಾದ್ ವಹಿಸಿದ್ದು, ಹಿರಿಯ ರೋಟೇರಿಯನ್ ಡಾ.ಕೆ. ಎಂ.ಜಯಕುಮಾರ್, ಎಸ್.ಜಯಪ್ರಕಾಶ್, ಕಾರ್ಯದರ್ಶಿ ತಿಪ್ಪೇಸ್ವಾಮಿ, ನಿರ್ದೇಶಕರಾದ ಡಾ.ಎಲ್.ಎಸ್.ವೀರೇಶ್,ಸಂತೋಷ್‌ರೆಡ್ಡಿ, ವಕೀಲರ ಸಿ.ಸಿದ್ದಾರ್ಥ, ಎಸ್.ಮುರುಗೇಶ್, ಕೆ.ಎ.ಮೂರ್ತಪ್ಪ, ಕಿರಣ್, ಬಸವರಾಜು, ಭೀಮಣ್ಣ ಮುಂತಾದವರು ಉಪಸ್ಥಿತರಿದ್ದರು.

## ತಳಕು ಹೋಬಳಿ ಕ್ರೀಡಾಕೂಟ : ರೇಣುಕಾಪುರ, ಬಸಾಪುರ ಶಾಲೆಗೆ ಹೆಚ್ಚು ಬಹುಮಾನ



» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿ ಮಟ್ಟ ವಲಯ–2ರ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ ನಗರದ ಡಿ.ಸುಧಾಕರ್ ಕ್ರೀಡಾಂಗಣದಲ್ಲಿ ಎರಡು ದಿನಗಳ ಕಾಲ ನಡೆಯಿತು. ಸದರಿ ಕ್ರೀಡಾಕೂಟದಲ್ಲಿ ಬಸಾಪುರ ಮತ್ತು ರೇಣುಕಾಪುರ ಶಾಲೆಯ ವಿದ್ಯಾರ್ಥಿಗಳು ವಿವಿಧ ಸ್ಪರ್ಧಿಗಳಲ್ಲಿ ಬಾಗವಹಿಸಿ ಬಹುಮಾನ ಪಡೆದಿದ್ದಾರೆಂದು ಮುಖ್ಯ ಶಿಕ್ಷಕ ಮಾರಣ್ಣ ತಿಳಿಸಿದ್ದಾರೆ. ಅವರು ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ, ಬಸಾಪುರ ಶಾಲೆಯ ದೀಕ್ಷಿತಾ ಚಕ್ರ ಎಸೆತದಲ್ಲಿ ಪ್ರಥಮ, ಗುಂಡು ಎಸೆತದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾಳೆ, ರೇಣುಕಾಪುರ ಶಾಲೆಯ ಭಾಗ್ಯಮ್ಮ 100 ಮೀಟರ್ ಓಟದಲ್ಲಿ ದ್ವಿತೀಯ, ಪ್ರಿಯಾಂಕ ಗುಂಡು ಎಸೆತದಲ್ಲಿ ದ್ವಿತೀಯ, ಪ್ರಿಯದರ್ಶಿನಿ 400 ಮೀಟರ್ ಓಟದಲ್ಲಿ ತೃತೀಯ, ರಿಲೆಯಲ್ಲಿ ಅನಿತಾ ಸಂಗಡಿಗರು ದ್ವಿತೀಯ, ಎತ್ತರ ಜಿಗಿತದಲ್ಲಿ ಸಿಂದು ದ್ವಿತೀಯ, ಬ್ಯಾಡ್ಮಿಂಟನ್‌ನಲ್ಲಿ ರುದ್ರೇಶ್ ಮತ್ತು ಶಿವಕುಮಾರ್ ಪ್ರಥಮ ಸ್ಥಾನ ಗಳಿಸಿದ್ದು ವಿಜೇತ ಎಲ್ಲಾ ವಿದ್ಯಾರ್ಥಿಗಳಿಗೆ ಶಿಕ್ಷಕರಾದ ಇ.ಟಿ.ಹನುಮಣ್ಣ, ಕೆ.ಎಂ.ಪುಷ್ಪಲತಾ, ಜೆ.ರಾಜು, ಟಿ.ಸಿರಿಯಣ್ಣ, ಮಂಜಣ್ಣ, ಮಲ್ಲೇಶಪ್ಪ, ಜ್ಯೋತಿ, ತಿಪ್ಪೇಸ್ವಾಮಿ, ಕೆಂಚರಾಜ್, ಭೀಮಣ್ಣ, ಪ್ರದೀಪ್, ಟಿ.ಪವಿತ್ರ ಮುಂತಾದವರು ಅಭಿನಂದನೆ ಸಲ್ಲಿಸಿದರು.

## ಸೆ.15ರೊಳಗೆ ಬೆಳೆ ಸಮೀಕ್ಷೆಗೆ ಸೂಚನೆ

ಚಿತ್ರದುರ್ಗ

2023–24ನೇ ಸಾಲಿನ ಮುಂಗಾರು ಹಂಗಾಮಿನ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ (ಖ–ಘಃಅಖಖ) ಯೋಜನೆಯಲ್ಲಿ 2021–22, 2022–23ನೇ ಸಾಲಿನಲ್ಲಿ ಬೆಳೆ ಸಮೀಕ್ಷೆಯಾಗದ ಅಡಿಕೆ, ಮಾವು ಮತ್ತು ದಾಳಿಂಬೆ ಬೆಳೆಗಳಿಗೆ ಬೆಳೆ ವಿಮೆಗೆ ನೊಂದಾಯಿತ ರೈತರು ಇದೇ ಸೆಪ್ಟೆಂಬರ್ 15ರೊಳಗಾಗಿ ಬೆಳೆ ಸಮೀಕ್ಷೆ ಮಾಡಿಸಿಕೊಳ್ಳುವ ಷರತ್ತಿನ ಮೇಲೆ ಬೆಳೆ ವಿಮೆಗೆ ನೊಂದಾಯಿಸಿಕೊಳ್ಳಲಾಗಿರುತ್ತದೆ.

## ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

2023–24ನೇ ಸಾಲಿಗೆ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ದ, ಸಿಖ್ ಮತ್ತು ಪಾರ್ಸಿ ಸಮುದಾಯದ ಅಭ್ಯರ್ಥಿಗಳಿಗೆ 10 ತಿಂಗಳ ವಸತಿ ಸಹಿತ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡಲು ತಂತ್ರಾಂಶದ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 16 ಅರ್ಜಿ ಸಲ್ಲಿಸಲು ಕೊನೆ ದಿನ. http://sevasindhu.karnataka.gov.in/sevasindhu/Departmentservices ವೆಬ್‌ಸೈಟ್ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.

## ಪ್ರಮುಖ ಸುದ್ದಿ

### ಪ್ರೌಢಶಾಲಾ ಸಹ ಶಿಕ್ಷಕರ ಸಂಘದಿಂದ ಪ್ರತಿಭಾಪುರಸ್ಕಾರ ಹಾಗೂ ಸನ್ಮಾನಿಸಿ ಶಾಸಕ ರಘುಮೂರ್ತಿ ಹೇಳಿಕೆ

# ಶಿಕ್ಷಣ ಕ್ಷೇತ್ರಕ್ಕೆ ಕೊಡುಗೆ ನೀಡಿದವರ ಸ್ಮರಣೆ ಅಗತ್ಯ

» ಚಳ್ಳಕೆರೆ

ಶಿಕ್ಷಣದ ಜೊತೆಯಲ್ಲಿ ಹಲವಾರು ಜನಪರ ಯೋಜನೆಗಳು ಹಾಗೂ ಶೈಕ್ಷಣಿಕ ಪ್ರಗತಿಗೆ ವಿಶೇಷವಾಗಿ ಶ್ರಮಿಸುತ್ತಿರುವ ತಾಲ್ಲೂಕು ಪ್ರೌಢಶಾಲಾ ಸಹ ಶಿಕ್ಷಕರ ಸಂಘ ವಿದ್ಯಾರ್ಥಿಗಳ ಪ್ರತಿಭಾಪುರಸ್ಕಾರ, ನಿವೃತ್ತ ಶಿಕ್ಷಕರಿಗೆ ಸನ್ಮಾನಿಸುವ ಮೂಲಕ ಸೇವೆಯನ್ನು ಸ್ಮರಿಸುವುದಲ್ಲದೆ, ವಿದ್ಯಾರ್ಥಿ ಗಳಿಗೂ ಪ್ರೋತ್ಸಾಹ ನೀಡುತ್ತಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ರೋಟರಿ ಬಾಲಭವನದಲ್ಲಿ ತಾಲ್ಲೂಕು ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ವತಿಯಿಂದ ಸರ್ಕಾರಿ ಮತ್ತು ಅನುದಾನಿತ 71 ಪ್ರೌಢಶಾಲೆಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ, ಪ್ರಶಸ್ತಿ ಪುರಸ್ಕೃತ ಶಿಕ್ಷರಿಗೆ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಸಹ ಶಿಕ್ಷಕರ ಸಂಘ ಮುಂದಿನ ದಿನಗಳಲ್ಲೂ ಸಹ ಇಂತಹ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮೂಲಕ ಇನ್ನೂ ಹೆಚ್ಚಿನ ರೀತಿಯಲ್ಲಿ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಬೇಕು ಎಂದರು.



ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾತನಾಡಿ, ವಿದ್ಯಾರ್ಥಿಗಳ ಪ್ರತಿಭಾಪುರಸ್ಕಾರ ಜೊತೆಯಲ್ಲಿ ವಿದ್ಯಾರ್ಥಿಗಳ ಪ್ರತಿಭೆಯನ್ನುಗುರುತಿಸಿಗೌರವಿಸುವನಿವೃತ್ತ ಶಿಕ್ಷಕರಿಗೂ ಸಹ ಸನ್ಮಾನವಾಗುತ್ತಿರುವುದು ಸಂತಸ ಸಂಗತಿ. ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಎಲ್ಲಾ ಕಾರ್ಯಚಟುವಟಿಕೆಗಳಿಗೆ ಸಹಕಾರ ನೀಡುವ ಭರವಸೆ ನೀಡಿದರು.

ಸಂಘದ ಅಧ್ಯಕ್ಷ ಬಿ.ರಾಜಕುಮಾರ್ ಮಾತನಾಡಿ, ತಾಲ್ಲೂಕಿನ ಪ್ರೌಢಶಾಲಾ ಸಹ ಶಿಕ್ಷಕರ ಸಂಘ ತನ್ನದೇಯಾದ ಗುರಿ ಹೊಂದಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಅಭಿಮಾನದಿಂದ ಗೌರವಿಸುವ ಜೊತೆಗೆ, ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದವರಿಗೂ ಸಹ ಇಂದು ಸನ್ಮಾನವನ್ನು ಹಮ್ಮಿಕೊಂಡಿದೆ. ಸಂಘದ ಕ್ರಿಯಾಶೀಲತೆಯನ್ನು ಹೆಚ್ಚಿಸಲು ಇನ್ನೂ ಹಲವಾರು ಕಾರ್ಯಕ್ರಮ ಹಮ್ಮಿಕೊಳ್ಳಲು ಸಂಘ ನಿರ್ಧರಿಸಿದೆ ಎಂದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಸಂಘಟನಾ ಪ್ರಧಾನ ಕಾರ್ಯದರ್ಶಿ ಸಿ.ಟಿ.ವೀರೇಶ್ ಮಾತನಾಡಿ, ಸಹ ಶಿಕ್ಷಕರ ಸಂಘ ತನ್ನದೇಯಾದ ಸಂಘಟನಾ ಕಾರ್ಯದಿಂದ ಎಲ್ಲರ ವಿಶ್ವಾಸ ಗಳಿಸುವಲ್ಲಿ ಮುಂದಾಗಿದೆ. ಇತ್ತೀಚಿನ ದಿನಗಳಲ್ಲಿ ಶಿಕ್ಷಕರ ಮೇಲೆ ಕೆಲಸ ಹೊರೆಯನ್ನು ಹಾಕುವ ಮೂಲಕ ಸರ್ಕಾರಿ ನೌಕರರು ಕೆಲಸ ಮಾಡದ ಸ್ಥಿತಿ ಉಂಟಾಗಿದೆ. ಸರ್ಕಾರದ ಸೇವೆಯಲ್ಲಿರುವ ನಾವೆಲ್ಲರೂ ಸಮಾಜದ ಒಳಿತಿಗಾಗಿ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸೋಣವೆಂದರು.

ಕಾರ್ಯದರ್ಶಿ ಈರಣ್ಣ, ಜಿಲ್ಲಾ ಖಜಾಂಚಿ ರುದ್ರಮುನಿ, ತಾಲ್ಲೂಕು ಖಜಾಂಚಿ ಬಸವರಾಜು, ಉಪಾಧ್ಯಕ್ಷ ಗೋವಿಂದರೆಡ್ಡಿ, ನಾಗರಾಜು, ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಶ್ರೀನಿವಾಸ್, ಉಪನ್ಯಾಸಕ ಡಾ.ಎಚ್.ಬಿ.ಚಂದ್ರಶೇಖರ್, ಕನ್ನಡ ಶಿಕ್ಷಣ ಪರಿಷತ್ ಅಧ್ಯಕ್ಷ ರವಿಕುಮಾರ್, ನಗರಸಭಾ ಸದಸ್ಯ ಎಂ.ಜೆ.ರಾಘವೇಂದ್ರ, ವೆಂಕಟೇಶ್‌ರೆಡ್ಡಿ, ತಿಪ್ಪೇಸ್ವಾಮಿ, ಪಾಲಯ್ಯ, ಡಿ.ಟಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ರಾಜೀವ್ ಗಾಂಧಿ ಮೆಡಿಕಲ್ ಕಾಲೇಜು ಕನಕಪುರ ಶಿಫ್ಟ್; ರಾಮನಗರ ಬಂದ್‌ಗೆ ಕರೆ

ರಾಮನಗರ: ರಾಜೀವ್ ಗಾಂಧಿ ಮೆಡಿಕಲ್ ಕಾಲೇಜು ಕನಕಪುರಕ್ಕೆ ಶಿಫ್ಟ್ ಆದ ಹಿನ್ನೆಲೆಯಲ್ಲಿ ವಿವಿಧ ಸಂಘಟನೆಗಳು ಇಂದು (ಸೆ.08) ರಾಮನಗರ ಬಂದ್‌ಗೆ ಕರೆ ನೀಡಿವೆ. ಐಜೂರು ವೃತ್ತದಲ್ಲಿ ಪ್ರತಿಭಟನೆ ಪ್ರಾರಂಭವಾಗಿದ್ದು, ಪ್ರತಿಭಟನೆಯಲ್ಲಿ ಜೆಡಿಎಸ್, ಬಿಜೆಪಿ ಕನ್ನಡಪರ ಸಂಘಟನೆಗಳ ಸದಸ್ಯರು ಭಾಗಿಯಾಗಲಿದ್ದಾರೆ. ಸ್ಥಳದಲ್ಲಿ ಪೊಲೀಸರಿಂದ ಬಿಗಿ ಬಂದೋಬಸ್ತ್ ಇದೆ.

### ಜನಮಂಗಳ ಕಾರ್ಯಕ್ರಮದಡಿಯಲ್ಲಿ ವಾಟರ್ ಬೆಡ್ ವಿತರಣೆ



» ಮೊಳಕಾಲ್ಮುರು

ಮೊಳಕಾಲ್ಮುರು ತಾಲ್ಲೂಕಿನ ಹಾನಗಲ್ ವಲಯದ ಹಿರೆಕೆರೆಹಳ್ಳಿ ಕಾರ್ಯಕ್ಷೇತ್ರದ ಪರ್ವೀನ್ ಭಾನು ಅವರಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಜನಮಂಗಳ ಕಾರ್ಯಕ್ರಮದಡಿಯಲ್ಲಿ ವಾಟರ್ ಬೆಡ್ ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಕೃಷಿ ಮೇಲ್ವಿಚಾರಕರ ಉತ್ತರ ಕುಮಾರ್, ವಲಯ ಮೇಲ್ವಿಚಾರಕರಾದ ಕಾವ್ಯ, ಮತ್ತು ಸೇವಾ ಪ್ರತಿನಿಧಿ ಹಾಗು ಸಂಘದ ಸದಸ್ಯರು ಉಪಸ್ಥಿತರಿದ್ದರು

### ವಿರಾಟ್ ಹಿಂದೂ ಮಹಾಸಾಗರ ಗಣಪತಿ ಉತ್ಸವಕ್ಕೆ ಗೋ ಪೂಜೆಯೊಂದಿಗೆ ಚಾಲನೆ.



» ಹೊಸದುರ್ಗ

ಪಟ್ಟಣದ ಜೂನಿಯರ್ ಕಾಲೇಜು ಆವರಣದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ವಿರಾಟ್ ಹಿಂದೂ ಮಹಾಸಾಗರ ಗಣಪತಿ ಭಕ್ತ ಮಂಡಳಿ ವತಿಯಿಂದ 10ನೇ ವರ್ಷದ ಗಣೇಶೋತ್ಸವಕ್ಕೆ ಸಕಲ ಸಿದ್ಧತೆಗಳು ಭರದಿಂದ ಸಾಗಿದ್ದು, ಉತ್ಸವದ ಆರಂಭಿಕವಾಗಿ ಶುಕ್ರವಾರ ಬೆಲಗೂರು ಮಾರುತಿ ಗುರುಪೀಠದ ಶ್ರೀ ವಿಜಯ ಮಾರುತಿಶರ್ಮ ಸ್ವಾಮೀಜಿ ದಿವ್ಯ ಸಾನಿಧ್ಯದಲ್ಲಿ ಗೋಪೂಜೆ ಮತ್ತು ಧ್ವಜ ಪೂಜೆಯ ಮೂಲಕ ಉತ್ಸವದ ಸಿದ್ಧತೆಗೆ ಚಾಲನೆ ನೀಡಲಾಯಿತು. ಕಾರ್ಯಕ್ರಮದ ಕುರಿತು ವಿರಾಟ್ ಹಿಂದೂ ಮಹಾಸಾಗರ ಗಣಪತಿ ಭಕ್ತ ಮಂಡಳಿಯ ಅಧ್ಯಕ್ಷ ಪ್ರದೀಪ್ ಮಾತನಾಡಿ, ಇದೇ ತಿಂಗಳ ಸೆ.18ರ ಸೋಮವಾರದಿಂದ 30ರ ಶನಿವಾರದವರೆಗೆ 13 ದಿನಗಳ ಕಾಲ ಗಣೇಶೋತ್ಸವ ನಡೆಯಲಿದೆ. 18 ರಂದು ಶ್ರೀ ಸ್ವಾಮಿಯವರ ಪ್ರತಿಷ್ಠಾಪನೆ, 29 ರ ಬೆಳಿಗ್ಗೆ ಗಣಹೋಮ, ಪೂಜಾದಿಗಳು, ಪೂರ್ಣಾಹುತಿ, ಅನ್ನ ಸಂತರ್ಪಣೆ ನಡೆಯಲಿದೆ. 30 ರ ಶನಿವಾರದಂದು ವಿವಿಧ ವಾದ್ಯ ಕಲಾ ತಂಡಗಳೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಬೃಹತ್ ಶೋಭಾಯಾತ್ರೆ ಜರುಗಲಿದ್ದು, ಸಂಜೆ ಮಠದ ಹೊಂಡದಲ್ಲಿ ಶ್ರೀ ಸ್ವಾಮಿಯವರ ಉದ್ವಾಸನಾ ಕಾರ್ಯಕ್ರಮ ನಡೆಯಲಿದೆ. ಭಕ್ತರು ತನು–ಮನ–ಧನ ಸಹಾಯ ನೀಡಿ ಎಂದು ಹೇಳಿದರು. ಈ ವೇಳೆ ಬನಶಂಕರಿ ಬ್ಯಾಂಕ್ ಅಧ್ಯಕ್ಷ ಮಂಜುನಾಥ್, ಸದ್ಗುರು ಸಂಸ್ಥೆ ಮಾಲೀಕ ಡಿ.ಎಸ್.ಪ್ರದೀಪ್, ಮುಖಂಡರಾದ ಮಠ ಶಿವು, ಸತೀಶ್, ಸಂತೋಷ್, ಸಿಂಧೂ ಅಶೋಕ್, ಸಮಿತಿ ಸದಸ್ಯರಾದ ಮನೋಜ್, ಅರುಣ್ ರಾಮಗಿರಿ, ಭರತ್ ಮತ್ತು ಶ್ರೇಯಸ್ ಸೇರಿದಂತೆ ಹಲವರಿದ್ದರು.

### ಕೋಲಾರ ಡಿಸಿ ಕಚೇರಿ ಎದುರು ಬಿಜೆಪಿ ಪ್ರತಿಭಟನೆ

ಕೋಲಾರ: ರಾಜ್ಯ ಕಾಂಗ್ರೆಸ್ ಸರ್ಕಾರದ ಜನ ವಿರೋಧಿ ನೀತಿ ಖಂಡಿಸಿ ಬಿಜೆಪಿ ಕೋಲಾರ ಜಿಲ್ಲಾಧಿಕಾರಿ ಕಚೇರಿ ಎದುರು 11 ಗಂಟಗೆ ಪ್ರತಿಭಟನೆ ನಡೆಸಲಿದೆ. ಸಂಸದ ಮುನಿಸ್ವಾಮಿ, ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ವೇಣುಗೋಪಾಲ್ ನೇತೃತ್ವದಲ್ಲಿ ಪ್ರತಿಭಟನೆ ನಡೆಯಲಿದೆ. ಸರ್ಕಾರದ ವಿದ್ಯುತ್ ಲೋಡ್ ಶೆಡ್ಡಿಂಗ್, ವಿದ್ಯುತ್ ದರ ಏರಿಕೆ ಸೇರಿ ಹಲವು ವಿಚಾರಗಳ ಕುರಿತು ಪ್ರತಿಭಟನೆ ಮಾಡಲಿದೆ.

# ಗಣೇಶ ಚತುರ್ಥಿ, ಈದ್ ಮಿಲಾದ್ ಸಂಭ್ರಮದ ಆಚರಣೆಗೆ ನಾಗರೀಕ ಸೌಹಾರ್ದ ಸಭೆ; ವೆಂಕಟೇಶ್

» ದಾವಣಗೆರೆ

ಹಬ್ಬಗಳ ಆಚರಣೆ ಐಕ್ಯತೆಯ ಪ್ರತೀಕ, ಸಮಾಜದಲ್ಲಿ ಸ್ವಾಸ್ಥ್ಯ, ಶಾಂತಿ, ಸುವ್ಯವಸ್ಥೆ ಇದ್ದರೆ ಪ್ರತಿ ಕುಟುಂಬ ಅಭಿವೃದ್ಧಿ ಹೊಂದಲು ಸಾಧ್ಯವಾಗಲಿದೆ. ಈ ನಿಟ್ಟಿನಲ್ಲಿ ಗಣೇಶ ಚತುರ್ಥಿ ಮತ್ತು ಈದ್ ಮಿಲಾದ್ ಹಬ್ಬವನ್ನು ಸೌಹಾರ್ದಯುತವಾಗಿ ಆಚರಣೆ ಮಾಡಲು ಮುಂದಾಗೋಣ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾಡಳಿತ ಭವನದಲ್ಲಿನ ತುಂಗಭದ್ರಾ ಸಭಾಂಗಣದಲ್ಲಿ ಸೆಪ್ಟೆಂಬರ್ 18 ರಂದು ಗಣೇಶ ಚತುರ್ಥಿ ಮತ್ತು ಸೆ. 28 ರಂದು ನಡೆಯಲಿರುವ ಈದ್ ಮಿಲಾದ್ ಹಬ್ಬದ ಆಚರಣೆಯನ್ನು ಸೌಹಾರ್ದಯುತವಾಗಿ ಆಚರಣೆ ಮಾಡುವ ನಿಟ್ಟಿನಲ್ಲಿ ಕರೆಯಲಾದ ಸೌಹಾರ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗಣೇಶ ಚತುರ್ಥಿ ಮತ್ತು ಈದ್ ಮಿಲಾದ್ ಹಬ್ಬವನ್ನು ಸಂಭ್ರಮದಿಂದ ಆಚರಿಸೋಣ, ಈ ಎರಡೂ ಹಬ್ಬಗಳ ಮೆರವಣಿಗೆ ವೇಳೆ ಪ್ರಥಮ ಚಿಕಿತ್ಸೆ ವ್ಯವಸ್ಥೆ, ಅಂಬುಲೆನ್ಸ್ ವ್ಯವಸ್ಥೆ, ರಸ್ತೆಯಲ್ಲಿನ ಗುಂಡಿಗಳನ್ನು ಮುಚ್ಚುವಂತೆ ನಾಗರೀಕರು ಮನವಿ ಮಾಡಿದ್ದು ಹಬ್ಬದಲ್ಲಿ ಯಾರಿಗೂ ತೊಂದರೆಯಾಗದಂತೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಡಲಾಗುತ್ತದೆ. ಮತ್ತು ಬೆಸ್ಕಾಂನಿಂದ ನಿರಂತರ ವಿದ್ಯುತ್ ಪೂರೈಕೆಗೂ ಕ್ರಮ ಕೈಗೊಳ್ಳಲಾಗುತ್ತದೆ. ಕೆಲವು ಪೆಟ್ಟಿ ಶಾಫ್‌ಗಳು, ಡಾಬಾ ಹೋಟೆಲ್‌ಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತದೆ ಎಂಬ ದೂರುಗಳಿದ್ದು ಅಬಕಾರಿ ಮತ್ತು ಪೊಲೀಸ್ ಇಲಾಖೆ ಕ್ರಮ ಕೈಗೊಳ್ಳಲಿದೆ. ಹಬ್ಬದ ವೇಳೆ ಬಂಟಿಂಗ್ಸ್, ಫ್ಲೆಕ್ಸ್ ಅಳವಡಿಸಲು ನಿಗಧಿತ ಸ್ಥಳಗಳಲ್ಲಿ ಮಾತ್ರ ಅನುಮತಿ ಪಡೆದು ಅಳವಡಿಸಬೇಕೆಂದು ಸೂಚಿಸಲಾಗಿದೆ.



ಎಲ್ಲರೂ ಒಂದೇ ಕುಟುಂಬದ ಸದಸ್ಯರಿದ್ದಂತೆ, ಎಲ್ಲರೂ ಸೇರಿ ಜಿಲ್ಲೆಯನ್ನು ಅಭಿವೃದ್ಧಿಯೆಡೆಗೆ ಕೊಂಡೊಯ್ಯಬೇಕಾಗಿದೆ. ಸಮಾಜದಲ್ಲಿ ಸ್ವಾಸ್ಥ್ಯ, ಶಾಂತಿ, ಸಾಮರಸ್ಯ ಇರಬೇಕು. ಯಾವುದೇ ಸುಳ್ಳು ವದಂತಿಗಳಿಗೆ ಕಿವಿಗೊಡಬೇಡಿರಿ, ಜಿಲ್ಲಾ ಆಡಳಿತ ಎಲ್ಲಾ ಕ್ರಮ ಕೈಗೊಳ್ಳಲಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ಮಾತನಾಡಿ ನೀರಿನ ಮೂಲ ಕಲುಷಿತವಾಗದಂತೆ ಗಣೇಶನ ವಿಸರ್ಜನೆ ಮಾಡಲು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕ್ರಮ ಕೈಗೊಳ್ಳಲಾಗುತ್ತದೆ. ಶಾಂತಿ ಸಾಗರದಲ್ಲಿ 6 ಜಾಕ್‌ವೆಲ್‌ಗಳಿದ್ದು ಅದರ ಒಂದರಲ್ಲಿ ಮಾತ್ರ ಕುಡಿಯಲು ಯೋಗ್ಯವಲ್ಲ ಎಂದು ಈ ಮೊದಲು ಪರೀಕ್ಷಾ ವರದಿಯಲ್ಲಿ ಬಂದಿತ್ತು, ನಂತರದಲ್ಲಿ ಸರಿಯಾದ ವರದಿ ಬಂದಿರುತ್ತದೆ. ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಬೆಲ್ಲದ ಗಣೇಶನ ಪ್ರತಿಷ್ಠಾಪನೆಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಮಾತನಾಡಿ ಸೆ.18ರಂದು ಗಣೇಶ ಚತುರ್ಥಿ ಹಾಗೂ ಸೆ.28 ಈದ್ ಮಿಲಾದ್ ಹಬ್ಬವನ್ನು ಆಚರಿಸಲಾಗುತ್ತಿದ್ದು, ಗಣೇಶ ವಿಗ್ರಹಗಳ ಪ್ರತಿಷ್ಠಾಪನೆಗೆ ಕಡ್ಡಾಯವಾಗಿ ಆಯಾ ಪೊಲೀಸ್ ಠಾಣೆಯಲ್ಲಿ ಸ್ಥಾಪಿಸಲಾಗುವ ಏಕಗವಾಕ್ಷಿಯಲ್ಲಿ ಅನುಮತಿ ಪಡೆದು ಪ್ರತಿಷ್ಠಾಪನೆ ಮಾಡಬೇಕು. ಈ ಹಿಂದಿನ ಹಳೆಯ ಪದ್ಧತಿ, ನಿಯಮ ಅನುಸರಿಸಿ ಎಲ್ಲಾ ರೀತಿಯ ಸಿದ್ಧತೆ ಹಾಗೂ ಶಾಂತಿಯುತವಾಗಿ ಆಚರಿಸಬೇಕು. ಹೊಸದಾಗಿ ಸೂಕ್ಷ್ಮಯುತವಾದ ಪ್ರದೇಶಗಳಲ್ಲಿ ಗಣೇಶ ವಿಗ್ರಹಗಳ ಪ್ರತಿಷ್ಠಾಪನೆಗೆ ಅವಕಾಶವಿರುವುದಿಲ್ಲ.

ಗಣೇಶ ವಿಗ್ರಹಗಳ ಪ್ರತಿಷ್ಠಾಪನೆ ಮಾಡಿದ ಸ್ಥಳಗಳಲ್ಲಿ ಬೆಳಕು ಹಾಗೂ ಸಿ.ಸಿ ಟಿವಿ ವ್ಯವಸ್ಥೆ ಮಾಡಿಕೊಳ್ಳಬೇಕು, ಆಯೋಜಕರೇ ಸಂಪೂರ್ಣ ಹೊಣೆ ಹೊರಬೇಕು, ಹಾಗೂ ಅಹಿತಕರ ಘಟನೆಗಳು ನಡೆದಲ್ಲಿ ಸ್ಥಳೀಯ ಪೊಲೀಸ್ ಠಾಣೆಗೆ ಕರೆ ಮಾಡಿ ತಿಳಿಸಬೇಕು. ಹಬ್ಬದ ಆಚರಣೆಗಳಲ್ಲಿ ಪ್ರಚೋದನಾಕಾರಿ ಹೇಳಿಕೆ, ಅಸಭ್ಯ ವರ್ತನೆ ಕಂಡುಬಂದರೆ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ.

ಯಾವುದೇ ವಿದ್ಯುತ್ ಅವಘಡಗಳು ನಡೆಯದಂತೆ ಮೂರ್ತಿಗಳ ಕಡಿಮೆ ಎತ್ತರ, ಗಣಪತಿ ಅಲಂಕಾರ ಹಾಗೂ ಸಣ್ಣ ಗೋಪುರಗಳ ನಿರ್ಮಾಣ ಮಾಡಬೇಕು. ಧ್ವನಿವರ್ಧಕಗಳಿಗೆ ಬೆಳಗ್ಗೆ 6 ರಿಂದ ರಾತ್ರಿ 10ಗಂಟೆಯವರೆಗೆ ಮಾತ್ರ ಅನುಮತಿ ನೀಡಲಾಗುತ್ತದೆ. ಹಬ್ಬಗಳ ಆಚರಣೆ ಸಮಯದಲ್ಲಿಸಾಮಾಜಿಕಜಾಲತಾಣಗಳಲ್ಲಿ ಸುಳ್ಳು ಸುದ್ದಿಗಳು ಕಂಡು ಬಂದಲ್ಲಿ ಕಾನೂನು ಕ್ರಮ ಜರುಗಿಸಲಾಗುತ್ತದೆ. ಆಚರಣಗೆ ಬಲವಂತವಾಗಿ ದೇಣಿಗೆ ಸಂಗ್ರಹಿಸಬಾರದು ಎಂದರು.

ಗಣೇಶ ಮತ್ತು ಈದ್ ಮಿಲಾದ್ ಹಬ್ಬವನ್ನು ಶಾಂತಿ, ಸೌಹಾರ್ದತೆಯಿಂದ ಆಚರಣೆ ಮಾಡಬೇಕು. ಇಲಾಖೆಯಿಂದ ನೀಡಲಾಗುವ ಸೂಚನೆಗಳನ್ನು ನಿರ್ಬಂಧ ಎಂದುಕೊಳ್ಳಬಾರದು. ಎಲ್ಲರೂ ಕಾನೂನನ್ನು ಗೌರವಿಸಬೇಕು, ಇಲಾಖೆಯು ಸಹ ಎಲ್ಲರಿಗೂ ಸಹಕಾರ ನೀಡಲಿದೆ ಎಂದರು.

ಈ ವೇಳೆ ನಾಗರೀಕರು ಮಾತನಾಡಿ ದಾವಣಗೆರೆಯಲ್ಲಿ 1992 ರ ನಂತರ ಎಲ್ಲಾ ಹಬ್ಬಗಳನ್ನು ಬಹಳ ಸೌಹಾರ್ದಯುತವಾಗಿ ಆಚರಣೆ ಮಾಡಿಕೊಂಡು ಬರಲಾಗುತ್ತಿದೆ. ಸೌಹಾರ್ದತೆ ಇಲ್ಲದಿದ್ದಲ್ಲಿ ನಗರದ ಅಭಿವೃದ್ಧಿ ಕುಂಟಿತವಾಗುತ್ತದೆ. ಈ ನಿಟ್ಟಿನಲ್ಲಿ ಯಾವುದೇಅಹಿತಕರಘಟನೆಗಳಿಗೆಅವಕಾಶ ನೀಡುವುದಿಲ್ಲ ಎಂದು ಒಕ್ಕೊರಲಿನಿಂದ ತಿಳಿಸಿ ಕುಡಿಯುವ ನೀರಿನ ಪೂರೈಕೆ, ಕಸ ವಿಲೇವಾರಿ, ಸಾರ್ವಜನಿಕ ಶಾಂತಿ ಕಾಪಾಡಲು ಹಬ್ಬದ ವೇಳೆ ಮದ್ಯಪಾನ ನಿಷೇಧ, ಸುಗಮ ಮೆರವಣಿಗೆಗೆ ಅವಕಾಶ ಮಾಡಿಕೊಡಲು ಮನವಿ ಮಾಡಿದರು. ಪಾಲಿಕೆಯಿಂದ ಗಣಪತಿ ವಿಸರ್ಜನೆಗೆ ಆಯ್ದ ಸ್ಥಳಗಳನ್ನು ಗುರುತಿಸಲಾಗುತ್ತದೆ ಮತ್ತು ರಸ್ತೆಯಲ್ಲಿನ ಗುಂಡಿಗಳನ್ನು ಮುಚ್ಚುವುದು, ನೀರು ಪೂರೈಕೆಯನ್ನು ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಹೆಚ್ಚುವರಿ ರಕ್ಷಣಾಧಿಕಾರಿ ರಾಮಗೊಂಡ ಬಿ.ಬಸರಗಿ ಸೇರಿದಂತೆಅನೇಕನಾಗರೀಕರಮುಖಂಡರು ಸಭೆಯಲ್ಲಿ ಉಪಸ್ಥಿತರಿದ್ದರು.

# ಸಕಾಲ ಅರಿವು–ಹರಿವು ಜಾಗೃತಿ; ಎಡಿಸಿ

» ಚಿತ್ರದುರ್ಗ

ನಿಗದಿತ ಕಾಲಮಿತಿಯಲ್ಲಿ ನಾಗರಿಕರಿಗೆ ಸರ್ಕಾರದ ವಿವಿಧ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಜಾರಿಗೊಂಡಿರುವ ಸಕಾಲ ಯೋಜನೆ ಕುರಿತು, ಆಶಾ ಕಾರ್ಯಕರ್ತೆಯರು ತಮ್ಮ ಮನೆ ಮನೆ ಭೇಟಿ ಸಂದರ್ಭದಲ್ಲಿ ಸಾರ್ವಜನಿಕರಿಗೆ ಹೆಚ್ಚಿನ ಅರಿವು ಮೂಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ಗುರುವಾರ ಆಶಾ ಕಾರ್ಯಕರ್ತೆಯರಿಗೆ ಸಕಾಲ ಯೋಜನೆ ಕುರಿತು ಏರ್ಪಡಿಸಿದ "ಸಕಾಲ ಅರಿವು–ಹರಿವು" ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಆಶಾ ಕಾರ್ಯಕರ್ತೆಯರು ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಮನೆ ಮನೆಯ ಭೇಟಿಯ ಸಮಯದಲ್ಲಿ ಸಾರ್ವಜನಿಕರಿಗೆ ಸಕಾಲ ಯೋಜನೆಯಡಿಯ ಸೇವೆಗಳ ಕುರಿತು ಮಾಹಿತಿ ನೀಡಬೇಕು. ವಿವಿಧ ಯೋಜನೆಗಳ ಪಿಂಚಣಿಗಳು, ಜಾತಿ ಆದಾಯ ಪ್ರಮಾಣಪತ್ರ ಸೇರಿದಂತೆ ವಿವಿಧ ಸೇವೆಗಳನ್ನು ಪಡೆಯಲು ಸಾರ್ವಜನಿಕರು ಗ್ರಾಮ ಒನ್, ಅಟಲ್ ಜನಸ್ನೇಹಿ ಕೇಂದ್ರ ಮುಂತಾದೆಡೆ ಸಕಾಲ ಯೋಜನೆಯಲ್ಲಿಯೇ ಅರ್ಜಿ ಸಲ್ಲಿಸಿ, ನಿಗದಿತ ಕಾಲಮಿತಿಯೊಳಗೆ ಸೇವೆ ಪಡೆಯಬಹುದು. ಆಶಾ ಕಾರ್ಯಕರ್ತೆಯರು ನಗರ, ಗ್ರಾಮೀಣ ಪ್ರದೇಶಗಳಲ್ಲಿ ನೇರವಾಗಿ ಸಾರ್ವಜನಿಕರೊಂದಿಗೆ ಸಂವಹನ ನಡೆಸುವುದರಿಂದ, ಸಕಾಲ ಯೋಜನೆ ಕುರಿತು ಮಾಹಿತಿ ಹೊಂದಿರಬೇಕು, ಬಳಿಕ ಮನೆ ಮನೆ ಭೇಟಿ ಸಂದರ್ಭದಲ್ಲಿ ಸರ್ಕಾರದ ಯಾವ ಯಾವ ಇಲಾಖೆಗಳಲ್ಲಿ ಸಕಾಲ ಸೇವೆಗಳು ಇವೆ. ಅರ್ಜಿ ಸಲ್ಲಿಸುವ ಬಗೆ, ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೇ ಸಕಾಲ ಸೇವೆಯಡಿ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವ ಸಂಬಂಧ ಅರಿವು ಮೂಡಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರಂಗನಾಥ್, ಡಾ. ಚಂದ್ರಶೇಖರ ಕಂಬಾಳಿಮಠ, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು, ಸ್ವ ಸಹಾಯ ಗುಂಪುಗಳ ಪ್ರತಿನಿಧಿಗಳು ಇದ್ದರು.

### ಸೆ.12ರಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

220 ಕೆ.ವಿ.ಎ ಎಸ್.ಆರ್.ಎಸ್, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದವರು ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿರುವ 220/66/11 ಕೆ.ವಿ. ಚಿತ್ರದುರ್ಗ, 66/11 ಕೆ.ವಿ. ಚಿತ್ರದುರ್ಗದ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯಕ್ಕಾಗಿ ವಿದ್ಯುತ್ ವಿತರಣಾ ಕೇಂದ್ರಗಳಿಗೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ. ಈ ವಿದ್ಯುತ್ ವಿತರಣಾ ಕೇಂದ್ರಗಳಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ ಎನ್.ಜೆ.ವೈ ಮತ್ತು ಕೃಷಿ 11 ಕೆ.ವಿ ಮಾರ್ಗಗಳಲ್ಲಿ ಇದೇ ಸೆಪ್ಟೆಂಬರ್ 12ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

### ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ

ದಾವಣಗೆರೆ: ಸೆಪ್ಟೆಂಬರ್ 11 ರಂದು ಬೆಳಿಗ್ಗೆ 9.30ಕ್ಕೆ ಜಿಲ್ಲಾ ಕಾರಾಗೃಹ ಇಲಾಖೆಯ ಸಭಾಂಗಣದಲ್ಲಿ "ಕ್ರಿಯೆಯ ಮೂಲಕ ಭರವಸೆಯನ್ನು ಮೂಡಿಸೋಣ"( CREATE HOPE THROUGH ACTION ಎಂಬ ಘೋಷಣೆಯೊಂದಿಗೆ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆಯನ್ನು ಏರ್ಪಡಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ಜಿಲ್ಲಾ ಕಾರಾಗೃಹ ಇಲಾಖೆ, ಚಿಗಟೇರಿ ಜಿಲ್ಲಾ ಆಸ್ಪತ್ರೆ ಮನೋವೈದ್ಯಕೀಯ ವಿಭಾಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ, ಹಾಗೂ ಭಾರತೀಯ ಕಲಾ ಸಾಂಸ್ಕೃತಿಕ ಅಕಾಡೆಮಿ (ಅ) ದಾವಣಗೆರೆ. (ಮಾನಸಧಾರ ಸಮುದಾಯ ಮಾನಸಿಕ ಆರೋಗ್ಯ ಕೇಂದ್ರ) ಇವರ ಸಹಯೋಗದಲ್ಲಿ ಕಾರ್ಯಕ್ರಮ ಏರ್ಪಡಿಸಲಾಗಿದ್ದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ.ಎನ್ ಹೆಗಡೆ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಜಿಲ್ಲಾಮಟ್ಟದ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ

# ಸಮಾಜದ ಎಲ್ಲರೂ ಸಾಕ್ಷರರಾಗಬೇಕು



» ಚಿತ್ರದುರ್ಗ

ನಮ್ಮಲ್ಲಿ ಸಂಸ್ಕಾರ ಇದೆ. ಆದರೆ ಸಾಕ್ಷರತೆಯ ಕೊರತೆ ಇದೆ. ಸಮಾಜದ ಎಲ್ಲರೂ ಸಾಕ್ಷರರಾಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಹೇಳಿದರು. ಚಿತ್ರದುರ್ಗ ತಾಲ್ಲೂಕಿನ ಜಾನುಕೊಂಡ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ಸಾಕ್ಷರತಾ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಜಿಲ್ಲಾಮಟ್ಟದ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಾಕ್ಷರತೆಯ ಬಗ್ಗೆ ನನಗೆ ಸಾಕಷ್ಟು ಆಸಕ್ತಿ ಇದೆ. ಸಮಾಜದ ಪ್ರತಿಯೊಬ್ಬರು ಸಾಕ್ಷರರಾಗಬೇಕು. ಅಕ್ಷರ ಜ್ಞಾನದಿಂದ ಸಶಕ್ತ ಸಮಾಜ ನಿರ್ಮಾಣವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಮಂಜುಳಾ ಪ್ರಾಸ್ತಾವಿಕವಾಗಿ ಮಾತನಾಡಿ, ಶಿಕ್ಷಣದಿಂದ ವಂಚಿತರಾದ ಸಮಾಜದ ಎಲ್ಲಾ ಜನರಿಗೂ ಶಿಕ್ಷಣ ನೀಡುವುದು ಇಲಾಖೆಯ ಕರ್ತವ್ಯವಾಗಿದೆ. ಇದರ ಸೌಲಭ್ಯವನ್ನು ಪಡೆದುಕೊಂಡು ಉತ್ತಮ ಜೀವನ ನಡೆಸಬೇಕು ಎಂದು ತಿಳಿಸಿದರು. ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್ ಅವರು ಸಾಕ್ಷರತಾ ಧ್ವಜಾರೋಹಣ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಡಯಟ್ ಉಪನ್ಯಾಸಕರಾದ ವೆಂಕಟೇಶ್, ನಾಗರಾಜ್, ಜ್ಞಾನೇಶ್ವರ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಂಜುನಾಥ್, ಸಾಕ್ಷರತಾ ಇಲಾಖೆಯ ಕಾರ್ಯಕ್ರಮ ಸಹಾಯಕ ಮಂಜುನಾಥ್, ಜಾನುಕೊಂಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷೆ ತ್ರಿವೇಣಿ, ಗ್ರಾಮ ಪಂಚಾಯಿತಿ ಸದಸ್ಯ ರಾಮಲಿಂಗಪ್ಪ, ಶಿಕ್ಷಕರಾದ ದಿನೇಶ್, ಶಿವಮೂರ್ತಿ ಇದ್ದರು.

ಪ್ರಮುಖ ಸುದ್ದಿ

# ಬಂಜೆತನ ಮುಕ್ತ ಕರ್ನಾಟಕಕ್ಕೆ ಅಭಿಮಾನ

» ಚಿತ್ರದುರ್ಗ

ಬಂಜೆತನ ಮುಕ್ತ ಕರ್ನಾಟಕಕ್ಕಾಗಿ ರಾಜ್ಯದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಎಲ್ಲರೂ ಕೈಜೋಡಿಸುವಂತೆ ಸುವರ್ಣ ದೀಪ ವಿಷ್ಯುಯಲಿ ಇಂಪೇರ್ಡ್ ಅಂಡ್ ಫಿಸಿಕಲಿ ಚಾಲೆಂಜ್ಡ್ ಡೆವಲಪ್ಮೆಂಟ ಟ್ರಸ್ಟ್ ನ ದೀಪಕ್ ಆರ್. ಸಾಗರ್ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಂಜೆತನ ಎನ್ನುವುದು ಸಮಾಜದಲ್ಲಿ ಸಾಮಾಜಿಕ ಪಿಡುಗಾಗಿ ಪರಿಣಮಿಸಿದೆ. ಮಕ್ಕಳಿಗಾಗಿ ಹಲವರು ಇನ್ನೊಂದು ಮದುವೆ ಆಗಿದ್ದಾರೆ. ಮಕ್ಕಳು ಆಗದಿರಲು ಹೆಣ್ಣು ಮಾತ್ರ ಕಾರಣ ಎಂದು ಪುರುಷನಲ್ಲಿ ತಪ್ಪು ಇದ್ದರು ಸಹಾ ಅದನ್ನು




ಹೆಣ್ಣಿನ ಮೇಲೆ ಹಾಕುವುದರ ಮೂಲಕ ಹೆಣ್ಣನ್ನು ಸಮಾಜದ ದೃಷ್ಟಿಯಲ್ಲಿ ಎಲ್ಲಾದಕ್ಕೂ ಹೆಣ್ಣು ಕಾರಣ ಎಂಬ ಭಾವನೆ ಬರುವಂತೆ ಮಾಡುತ್ತಾರೆ. ಪ್ರಸ್ತುತ ದಿನಗಳಲ್ಲಿ ಮಕ್ಕಳನ್ನು ಪಡೆಯಲು ಆಧುನಿಕ ರೀತಿಯ ಚಿಕಿತ್ಸೆಗಳಿದ್ದು ಚಿಕಿತ್ಸೆ ಪಟಡಯುವ ಮೂಲಕ ಮಕ್ಕಳನ್ನು ಪಡೆಯಬಹುದು. ಇದನ್ನು ಜನರಿಗೆ ಮಾಹಿತಿ ನೀಡುವ ಸಲುವಾಗಿ ಜನ ಜಾಗೃತಿಯನ್ನು ಮೂಡಿಸುವ ಸಲುವಾಗಿ ಪ್ರವಾಸವನ್ನು ಮಾಡಿ ರಾಜ್ಯದ 31 ಜಿಲ್ಲೆಗಳಲ್ಲಿ ಸಂಚರಿಸಿ ಮತ್ತು ಬೀದಿ ನಾಟಕವನ್ನು ಮಾಡಲಾಗುತ್ತಿದೆ ಎಂದರು.

ಆಧುನಿಕ ಜೀವನ ಶೈಲಿಯಲ್ಲಿ ಮನುಷ್ಯ ತನ್ನ ಬದುಕನ್ನು ಕಳೆಯುತ್ತಿದ್ದಾನೆ. ಪ್ರತಿ ದಿನ ಕಂಪ್ಯೂಟರ್ ಮುಂದೆ ಕುಳಿತು ಕೆಲಸವನ್ನು ಮಾಡುತ್ತಾನೆ. ಇದ್ದಲ್ಲದೆ ಸದಾ ವಾಹನ ಚಾಲನೆ ಮಾಡುವವರು, ಬಿಸಿಯಲ್ಲಿ ಕೆಲಸ ಮಾಡುವವರು ತಮ್ಮ ದೇಹದಲ್ಲಿ ಆಗುವ ಬದಲಾವಣೆಯನ್ನು ಗಮನಿಸುವುದಿಲ್ಲ ಇಂತಹರ ದೇಹದಲ್ಲಿ ಬದಲಾವಣೆಯಾಗಿ ಮಕ್ಕಳ ಜನನಕ್ಕೆ ಸಹಕಾರಿಯಾಗುವುದಿಲ್ಲ. ಇದರ ಬಗ್ಗೆ ಗ್ರಾಮಾಂತರ ಪ್ರದೇಶದಲ್ಲಿ ಬೀದಿ ನಾಟಕವನ್ನು ಮಾಡುವುದರ ಮೂಲಕ ಜನರಲ್ಲಿ ಜಾಗೃತಿಯನ್ನು ಮೂಡಿಸಲಾಗುತ್ತಿದೆ. ಕುಡಿತದಲ್ಲಿರುವವರು ಮಾದಕ ವಸ್ತುಗಳನ್ನು ಸೇವನೆ ಮಾಡುವವರು, ಗರ್ಭ ಮಾತ್ರಗಳನ್ನು ನುಂಗುವವರಿಗೆ ಮಕ್ಕಳಾಗುವುದು ಕಡಿಮೆಯಾಗಬಹುದಾಗಿದೆ. ಇದಕ್ಕೆ ಸವಾಲ್ ಎಂಬಂತೆ ಆಧುನಿಕ ತಂತ್ರಜ್ಞಾನದಿಂದ ಪ್ರತಿ ಹೆಣ್ಣು ತಾಯ್ತನವನ್ನು ಅನುಭವಿಸಬಹುದು. ತಂತ್ರಜ್ಞಾನದಿಂದ ಐವಿಎಫ್ ಮೂಲಕ ಮಗುವನ್ನು ಪಡೆಯಹುದಾಗಿದೆ. ಸೆಪ್ಟೆಂಬರ್ ನಲ್ಲಿ ಉಚಿತವಾಗಿ ಚಿಕಿತ್ಸೆಯನ್ನು ನೀಡಲಾಗುತ್ತದೆ. ಮಕ್ಕಳಿಲ್ಲದ ದಂಪತಿಗಳು ಇದರ ಪ್ರಯೋಜನವನ್ನು ಪಡೆಯಬಹುದಾಗಿದೆ ಎಂದು ದೀಪಕ್ ತಿಳಿಸಿದರು. ಗೋಷ್ಠಿಯಲ್ಲಿ ಭಾಗ್ಯಶ್ರೀ, ಮಹಿಮಾ, ಮಂಜುನಾಥ್ ಸೇರಿದಂತೆ ಇತರರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T